ಸಂಪುಟ : 9 ಸಂಚಿಕೆ 161 ಪುಟ : 4 ಬೆಲೆ: 3.00 ಗುರುವಾರ ಆಗಸ್ಟ್ 1 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 161 Pages : 4 Price : 3.00 Thursday August 1 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 1ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 31, 32 ದಾಸರ ಓಣಿ, ಭಜಂತ್ರಿ ಓಣಿ, ಸಿಕ್ಕಲಿಗಾರ ಓಣಿ, ರಂಗನವಾಡ 1 ನಂ ಶಾಲೆ, ಸುಣಗಾರ ಓಣಿ, ಏಳು ಮಕ್ಕಳ ತಾಯಿ ಗುಡಿ ಲೈನ್, ಮುಳಗುಂದ ನಾಕಾ ರಸ್ತೆ ಲೈನ್, ಗುಜ್ಜರ ಬಸ್ತಿ, ಕೋಳಿಕೇರಿ ಮೂಲಿ ಲೈನ್, ಹಳೇ ಕಚೇರಿ ರಸ್ತೆ, ಜೋಡ ಮಾರುತಿ ಗುಡಿ ಲೈನ್, ತ್ರಿಕೋಟೇಶ್ವರ ಗುಡಿ ಲೈನ್, ಮಖಾನಗಲ್ಲಿ, ಉಡಚಮ್ಮನ ಗುಡಿ ಲೈನ್, ಅಬ್ಬಿಗೇರಿ ಕಾಂಪೌಂಡ್, ಸಾಲ ಮನೆ, ಕಮ್ಮಾರ ಸಾಲ, ಉರ್ದು ಶಾಲೆ ಹಿಂದಿನ ಭಾಗ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 30, 34, 35 ವಡ್ಡರಗೇರಿ 46 ಪ್ಲಾಟ್, 76 ಪ್ಲಾಟ್, ಶಿವಾನಂದ ಗಾರ್ಡನ್ 1, 2, 3 ನೇ ಕ್ರಾಸ್, ಬಾಲಾಜಿನಗರ, ಬಾಪೂಜಿನಗರ, ಸೇವಾಲಾಲ್ ನಗರ, ಬಸವೇಶ್ವರ ಶಾಲೆ ಲೈನ್, ದೇವರಾಜ್ ಹಾಸ್ಟೆಲ್, ನೀಲಮ್ಮತಾಯಿ ಮಠದ ಲೈನ್.

ವಾರ್ಡ್ ನಂ. 18, 19 ಮಡಿವಾಳದವರ ಲೈನ್, ಕೋನೇರಿ ಹೊಂಡ, ಅಂಬೇಡ್ಕರ್ ನಗರ, ಬಾಗಲಕೋಟಿ ಲೈನ್, ಡೋರಗಲ್ಲಿ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 30 ಸಂಭಾಪುರ ರಸ್ತೆ, ಮುತ್ತಿನ ಪೆಂಡಿಮಠ ಲೈನ್, ಅಬ್ಬಿಗೇರಿ ಲೈನ್, ಪಾಶಿ, ಸೊನಾ, ರೋಣದವರ ಲೈನ್, ಕೇಶವ ನಗರ, ಸಂಕಣ್ಣವರ ಲೇಔಟ್, ಎಸ್ ಪಿ ಆಫೀಸ್ ಕ್ವಾರ್ಟರ್ಸ್, ಪುಟ್ಟರಾಜ್ ನಗರ, ಟಿ ವಿ ಎಸ್ ಶೋ ರೂಮ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 29 ಪೊಲೀಸ್ ಸ್ಟೇಷನ್ ಲೈನ್, ಚಂದಾವರಿ ಸರ್ ಲೈನ್, ಡಂಬಳದವರ ಲೈನ್, ಹುಲಿಗೆಮ್ಮ ದೇವಿ ಗುಡಿ ಲೈನ್, ಕಲಾ ಮಂದಿರ ರೋಡ್, ಕೆ ವಿ ಎಸ್ ಆರ್ ಹಾಸ್ಟೆಲ್ ಲೈನ್, ಉರ್ದು ಶಾಲೆಯ ಲೈನ್ ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮುಖ್ಯಮಂತ್ರಿ ಮನೆ ಚಲೋ



■ವಿಜಯಸಾಕ್ಷಿ ಸುದ್ದಿ, ಗದಗ

ಕಟ್ಟಡ ಕಾರ್ಮಿಕರ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಆಗಸ್ಟ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮುಖ್ಯಮಂತ್ರಿ ಮನೆ ಚಲೋ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಶೈಕ್ಷಣಿಕ ಸಹಾಯಧನ ಕಡಿತ ಮಾಡಿರುವ ಆದೇಶ ಹಿಂಪಡೆಯಬೇಕು. 2021ರ ಅಧಿಸೂಚನೆಯನ್ವಯ ಶೈಕ್ಷಣಿಕ ಧನಸಹಾಯ ಬಿಡುಗಡೆ ಮಾಡಬೇಕು. ನೈಜ ಕಾರ್ಮಿಕರ ನೋಂದಣಿ ಮತ್ತು ಮರುನೋಂದಣಿ ಅರ್ಜಿಗಳನ್ನು ಸಕಾರಣವಿಲ್ಲದೆ ತಿರಸ್ಕರಿಸುವುದನ್ನು ನಿಲ್ಲಿಸಬೇಕು. ಸೌಲಭ್ಯಗಳಿಗಾಗಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿ ಮಾಡಬೇಕು. ತಾಂತ್ರಿಕ ನೋಂದಣಿಗಳು ಹಾಗೂ ಸರ್ವರಸ್ ಸಮಸ್ಯೆ ಪರಿಹರಿಸಬೇಕು. ಬಾಕಿ ಇರುವ ಸೆಸ್ ಸಂಗ್ರಹ ಮಾಡಿ ಬೃಹತ್ ಖಾಸಗಿ ಹಾಗೂ ಸಾರ್ವಜನಿಕ ನಿರ್ಮಾಣಗಳಿಗೆ ಶೇ 2ರಷ್ಟು ಸೆಸ್ ವಿಧಿಸಬೇಕು ಇವೇ ಮುಂತಾದ ಬೇಡಿಕೆಗಳನ್ನು ಈಡೇರಿಸಬೇಕೆಂದು ಕಟ್ಟಡ ಕಾರ್ಮಿಕರ ಸಂಘಟನೆಗಳ ಸಮನ್ವಯ ಸಮಿತಿ ಒತ್ತಾಯಿಸಿದೆ.

ಅಗಸ್ಟ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಎಲ್ಲರೂ ಪಾಲ್ಗೊಳ್ಳಬೇಕೆಂದು ಕಾರ್ಮಿಕ ಮುಖಂಡರಾದ ಮಾರುತಿ ಚಿಟಗಿ ತಿಳಿಸಿದರು. ಇದೇ ಸಂದರ್ಭದಲ್ಲಿ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಮುತ್ತಪ್ಪ ಚಲವಾದಿ, ಹನಮಂತಪ್ಪ ಮಾದರ, ಹನಮಂತಪ್ಪ ಮಲ್ಲಾಡದ, ಮಹಾಂತೇಶ ಮೇಗಲಮನಿ, ಬಸವರಾಜ ಗಂಗಮ್ಮನವರ, ಮಂಜುಳಾ ಮಾದರ, ಮಂಜುನಾಥ, ಹನಮಂತ ಕೊಡಬಾಳ, ಗಾಳೆಪ್ಪ ಹೊಸಮನಿ, ಕನಕಪ್ಪ ಹಾದಿಮನಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಮೌನಾನುಷ್ಠಾನ ಮಂಗಲೋತ್ಸವ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ನರಸಾಪೂರ ಗ್ರಾಮದ ಮೃಡಗಿರಿ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಶಾಖಾಮಠದಲ್ಲಿ ಆಷಾಢ ಮಾಸದ ನಿಮಿತ್ತ ಲೋಕ ಕಲ್ಯಾಣಾರ್ಥ ಹಾಗೂ ಭಕ್ತೋದ್ಧಾರಕ್ಕಾಗಿ ಹಮ್ಮಿಕೊಂಡಿದ್ದ 32ನೇ ಶಿವಯೋಗ ಮೌನಾನುಷ್ಠಾನ ಮಂಗಲೋತ್ಸವ ಕಾರ್ಯಕ್ರಮ ಆಗಸ್ಟ್ 2ರಂದು ಬೆಳಿಗ್ಗೆ 10.30ಕ್ಕೆ ಜರುಗಲಿದೆ.

ಮುಂಡರಗಿಯ ಅನ್ನದಾನೀಶ್ವರ ಸಂಸ್ಥಾನಮಠದ ಜಗದ್ಗುರು ನಾಡೋಜ ಡಾ. ಅನ್ನದಾನೀಶ್ವರ ಸ್ವಾಮೀಜಿ ಅವರ ಅಪ್ಪಣೆ ಮೇರೆಗೆ ಸ್ಥಳೀಯ ಶಾಖಾಮಠದ ಜಗದ್ಗುರು ಡಾ. ವೀರೇಶ್ವರ ಸ್ವಾಮೀಜಿ ಅವರು ಜು. 10ರಂದು ಮೌನಾನುಷ್ಠಾನ ಆರಂಭಿಸಿದ್ದರು. ಮೌನಾನುಷ್ಠಾನ ಮಂಗಲೋತ್ಸವದಲ್ಲಿ ಭಕ್ತರು ಪಾಲ್ಗೊಳ್ಳಬೇಕು ಎಂದು ಶ್ರೀಮಠ ಪ್ರಕಟಣೆ ತಿಳಿಸಿದೆ.

### ಬಿಡಾಡಿ ದನದ ದಾಳಿಗೆ ಪ್ರಾಣತೆತ್ತ ವೃದ್ಧ । ಭೀಕರ ದೃಶ್ಯ ಸಿಸಿ ಟಿವಿಯಲ್ಲಿ ಸೆರೆ । ಸಾರ್ವಜನಿಕರಿಂದ ಪ್ರತಿಭಟನೆ

# ಯಮಕಿಂಕರನಾದ ಬಿಡಾಡಿ ಜಾನುವಾರು

■ವಿಜಯಸಾಕ್ಷಿ ಸುದ್ದಿ, ಗದಗ





ಗದಗ-ಬೆಟಗೇರಿ ಅವಳಿ ನಗರದಲ್ಲಿ ಬಿಡಾಡಿ ದನಗಳ ಹಾವಳಿ ಹೆಚ್ಚಾಗಿರುವ ಬಗ್ಗೆ ಹಲವು ದಿನಗಳಿಂದ ದೂರುಗಳು ಕೇಳಿಬರುತ್ತಲೇ ಇದ್ದವು. ಕೆಲವೊಮ್ಮೆ ಅವುಗಳ ಪಾಡಿಗೆಂಬಂತೆ ರಸ್ತೆ ಪಕ್ಕದಲ್ಲೋ, ಬೀದಿಗಳಲ್ಲೋ ಮಲಗಿರುತ್ತಿದ್ದ ಕೆಲ ದನಗಳು ಇದ್ದಕ್ಕಿದ್ದಂತೆ ಹಣಾಹಣಿ ಕಾಳಗಕ್ಕೂ ನಿಂತುಬಿಡುತ್ತಿದ್ದವು. ಇದರಿಂದ ವಾಹನ ಸವಾರರಿಗೆ, ಪಾದಚಾರಿಗಳಿಗೆ ಭಯ ಮೂಡುವಂತಾಗಿತ್ತು. ಬುಧವಾರ ಇಂತದೇ ಬಿಡಾಡಿ ದನಗಳು ವೃದ್ಧರೊಬ್ಬರ ಮೇಲೆ ದಾಳಿ ನಡೆಸಿ, ಪ್ರಾಣವನ್ನೇ ತೆಗೆದಿರುವ ಘಟನೆಯಿಂದ ಇದುವರೆಗೂ ಶಾಂತವಾಗಿದ್ದ ಈ ದನಗಳು 'ಹಂತಕ'ರಾಗಿ ಬದಲಾಗಿರುವುದು ಸಾರ್ವಜನಿಕರಲ್ಲಿ ಆತಂಕ ಹೆಚ್ಚಿಸಿದೆ.

ಬುಧವಾರ ಬೆಳ್ಳಂಬೆಳಗ್ಗೆ ಬಿಡಾಡಿ ದನವೊಂದರ ದಾಳಿಗೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದ ನಿವಾಸಿ ಶಂಕ್ರಪ್ಪ ಹೋಳಿ (70) ಎಂಬುವರು ಗದಗ ನಗರಕ್ಕೆ ಬಂದು, ಸಂಬಂಧಿಕರ ಮನೆಗೆ ಹೊರಟಿದ್ದರು. ಗದಗ-ಬೆಟಗೇರಿ ನಗರದ ಹೊಸ ಬನಶಂಕರಿ ದೇವಸ್ಥಾನದ ಬಳಿ ತನ್ನ ಪಾಡಿಗೆ ತಾನು ರಸ್ತೆಯಲ್ಲಿ ನಡೆದು ಹೋಗುವಾಗ, ಬಿಡಾಡಿ ದನವೊಂದು ವೃದ್ಧನ ಮೇಲೆ ಏಕಾಏಕಿ ದಾಳಿ ಮಾಡಿದೆ. ಮೂರ್ನಾಲ್ಕು ಬಾರಿ ಮನಸೋ ಇಚ್ಛೆ ತಿವಿದ ಪರಿಣಾಮ ದಾಳಿಯ ತೀವ್ರತೆಗೆ ಶಂಕ್ರಪ್ಪ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.



ಈ ಹಿಂದೆಯೂ ಕೂಡ, ನಗರಸಭೆ ಇಂತಹ ಬಿಡಾಡಿ ದನಗಳ ವಿರುದ್ಧ ಕಾರ್ಯಾಚರಣೆ ನಡೆಸಿ, ಅರ್ಧಕ್ಕೆ ಮೊಟಕುಗೊಳಿಸಿತ್ತು. ಆದರೆ ದನಗಳ ಹಾವಳಿ ಮಾತ್ರ ಮುಂದುವರೆದಿದ್ದು, ಮಹಿಳೆಯರು, ಮಕ್ಕಳು, ವೃದ್ಧರು ಸೇರಿದಂತೆ ವಾಹನ ಸವಾರರು ರಸ್ತೆ ಮೇಲೆ ಸಂಚರಿಸುವದೇ ದುಸ್ತರವಾಗಿದೆ. ಪ್ರತಿದಿನ ಬಿಡಾಡಿ ದನಗಳು ದಾಳಿ ಮಾಡುತ್ತಲೇ ಇವೆ. ಆದರೆ ನಗರಸಭೆ ಮಾತ್ರ ಈ ಬಗ್ಗೆ ಕಿಂಚಿತ್ತೂ ತಲೆಕೆಡಿಸಿಕೊಂಡಿಲ್ಲ ಎಂಬ ಆರೋಪವೂ ಕೇಳಿಬಂದಿತು.

ಈ ಸಂದರ್ಭದಲ್ಲಿ ಸ್ಥಳಕ್ಕಾಗಮಿಸಿದ ನಗರಸಭೆಯ ಅಧಿಕಾರಿಗಳ ಮೇಲೆ ಸದಸ್ಯರಾದ ರಾಘವೇಂದ್ರ ಯಳವತ್ತಿ, ಮಾಜಿ ಸದಸ್ಯ ದಶರಥ ಕೊಳ್ಳಿ ಹರಿಹಾಯ್ದರು.

ನಗರಸಭೆಗೆ ಬಿಡಾಡಿ ದನಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುವಂತೆ ಸಾಕಷ್ಟು ಬಾರಿ ಮನವಿ ಸಲ್ಲಿಸಿ, ಪ್ರತಿಭಟನೆ ನಡೆಸಿದರೂ ಪ್ರಯೋಜನವಾಗಿಲ್ಲ. ಈಗ ಯಾವ ತಪ್ಪನ್ನೂ ಮಾಡದೇ ತನ್ನ ಪಾಡಿಗೆ ನಡೆದು ಹೋಗುತ್ತಿದ್ದ ವೃದ್ಧ ಪ್ರಾಣ ಕಳೆದುಕೊಳ್ಳುವಂತಾಗಿದೆ. ಇದಕ್ಕೆಲ್ಲ ಯಾರು ಹೊಣೆ ಎಂದು ಸಾರ್ವಜನಿಕರು ಆಕ್ರೋಶ ಹೊರಹಾಕಿದರು.

ಘಟನೆ ಗಮನಕ್ಕೆ ಬರುತ್ತಿದ್ದಂತೆಯೇ ಸ್ಥಳೀಯರು ಆಂಬ್ಯುಲೆನ್ಸ್‌ಗೆ ಕರೆ ಮಾಡಿ ತಿಳಿಸಿದ್ದರು. ಆದರೆ, ವಿಷಯ ತಿಳಿಸಿ ಒಂದೂವರೆ ಗಂಟೆ ಕಳೆದರೂ ಆಂಬ್ಯುಲೆನ್ಸ್ ಸ್ಥಳಕ್ಕೆ ಬರಲಿಲ್ಲ. ಈ ಎಲ್ಲ ಘಟನೆಗಳ ವಿರುದ್ಧ ಆಕ್ರೋಶಗೊಂಡ ಸ್ಥಳೀಯರು, ಪಾಲಾ-ಬಾದಾಮಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ಸೇರಿದ್ದ ಸಾರ್ವಜನಿಕರ ಆಕ್ರೋಶ ಪ್ರತಿಭಟನೆಯ ಸ್ವರೂಪ ಪಡೆದಿದ್ದರಿಂದ ಕೆಲಕಾಲ ಸಂಚಾರ ವ್ಯವಸ್ಥೆ ಅಸ್ತವ್ಯಸ್ಥಗೊಂಡಿತು.

### ಶಾಸಕ ಜಿ.ಎಸ್. ಪಾಟೀಲರಿಂದ ಸ್ಥಳೀಯ ಕೆರೆಗಳ ಅಭಿವೃದ್ಧಿಯ ಕುರಿತು ಪರಿಶೀಲನೆ

# ಕೆರೆಗಳ ಅಭಿವೃದ್ಧಿಗೆ ನೀಲನಕ್ಷೆ

■ವಿಜಯಸಾಕ್ಷಿ ಸುದ್ದಿ, ಡಂಬಳ



ಈ ಭಾಗದ ರೈತರ ಹೃದಯದಂತೆ ಕೆಲಸ ಮಾಡುವ ಕೆರೆಗಳ ಅಭಿವೃದ್ಧಿಯ ಮೂಲಕ ಪ್ರಗತಿ ಸಾಧಿಸಿ, ಕೆರೆಗಳಲ್ಲಿ ಅತಿ ಹೆಚ್ಚು ನೀರು ಸಂಗ್ರಹವಾಗುವಂತೆ ಮಾಡಿ ರೈತರ ಬಲ ಹೆಚ್ಚಿಸಲಾಗುವುದು ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ, ಡೋಣಿ, ಅತ್ತಿಕಟ್ಟಿ ಕೆರೆಗಳಿಗೆ ಪರಿಸರವಾದಿ ಮತ್ತು ಲೇಕ್‌ಮ್ಯಾನ್ ಆಫ್ ಇಂಡಿಯಾ ಎಂದೇ ಕರೆಯಲ್ಪಡುವ ಆನಂದ ಮಲ್ಲಿಗವಾಡ ಅವರೊಂದಿಗೆ ಇಲ್ಲಿನ ಕೆರೆಗಳಿಗೆ ಭೇಟಿ ನೀಡಿ, ಅಭಿವೃದ್ಧಿಯ ಕುರಿತು ಪರಿಶೀಲಿಸಿ ಮಾತನಾಡಿದ ಅವರು, ಕೆರೆಗಳ ಅಭಿವೃದ್ಧಿ ಸಾಧಿಸಿದರೆ ರೈತರ ಶಕ್ತಿ ವೃದ್ಧಿಯಾಗುತ್ತದೆ. ಕೆರೆಗಳಲ್ಲಿ ನೀರಿನ ಸಂಗ್ರಹ ಹೆಚ್ಚುವಂತೆ ಮಾಡಿದಲ್ಲಿ ಹಳ್ಳದ ಬಾಂದಾರಗಳಲ್ಲಿ ನೀರು ಸಂಗ್ರಹದಿಂದ ಬೋರ್‌ವೆಲ್‌ಗಳು ಬತ್ತುವುದಿಲ್ಲ. ಇದರಿಂದ ರೈತರು ಆರ್ಥಿಕವಾಗಿ ಸಬಲರಾಗಲು ಸಾಧ್ಯ. ಕೆರೆಗಳ ಅಭಿವೃದ್ಧಿಗೆ ನೀಲನಕ್ಷೆ ಸಿದ್ಧಪಡಿಸಲಾಗುತ್ತಿದೆ. ಡಂಬಳ ಗ್ರಾಮದ ರಸ್ತೆ ಅಭಿವೃದ್ಧಿಗೆ ಆದ್ಯತೆ, ಕೆರೆಯ ನೀರು ಸರಾಗವಾಗಿ ಹರಿಯುವಂತೆ ಅಭಿವೃದ್ಧಿ ಸಾಧಿಸಲಾಗುವುದು. ಡಂಬಳ ಕೆರೆಯನ್ನು ಶೀಘ್ರವೇ ಸಂಪೂರ್ಣ ಭರ್ತಿ ಮಾಡಲಾಗುವುದು ಎಂದರು.

ಗೋಣಿಬಸಪ್ಪ ಕೊರ್ಲಹಳ್ಳಿ ಮಾತನಾಡಿ, ರೈತರು ಮುಖ್ಯ ವಾಹಿನಿಗೆ ಬರಬೇಕು. ಆರ್ಥಿಕವಾಗಿ ಸ್ಥಿತಿವಂತರಾಗಬೇಕು ಎನ್ನುವ ದೃಷ್ಟಿಯಿಂದ ಕೆರೆಗಳ ಪ್ರಗತಿಗೆ ಶಾಸಕ ಜಿ.ಎಸ್. ಪಾಟೀಲರು ಮುಂದಾಗಿರುವುದು ಈ ಭಾಗದ ರೈತರ ಹರ್ಷಕ್ಕೆ ಕಾರಣವಾಗಿದೆ ಎಂದರು.

ಪರಿಸರವಾದಿ ಆನಂದ ಮಲ್ಲಿಗವಾಡ ಮಾತನಾಡಿ, 2016ರಲ್ಲಿ ರಾಜ್ಯದಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸಲು ಮುಚ್ಚಿರುವ ಕೆರೆಗಳ ಹೂಳು ತೆಗೆಯಲಾಗಿತ್ತು. ಇದುವರೆಗೆ 115 ಕೆರೆಗಳ ಹೂಳನ್ನು ತೆಗೆಯಲಾಗಿದೆ. 9 ವರ್ಷದಿಂದ ಚೋಳರ ಕಾಲದ ರಾಜರ ಮಾದರಿಯಲ್ಲಿ ಕೆರೆಗಳ ಪ್ರಗತಿಯನ್ನು ಸಾಧಿಸಲಾಗುತ್ತಿದೆ. ಕೊಪ್ಪಳ, ಗದಗ ಜಿಲ್ಲೆ, ರೋಣ ಕ್ಷೇತ್ರ, ಯಲಬುರ್ಗಾ ಭಾಗದ ಕೆರೆಗಳನ್ನು ತಾಂತ್ರಿಕವಾಗಿ ಪರಿಶೀಲಿಸಿ ನೀಲನಕ್ಷೆ ತಯಾರಿಸಲಾಗುವುದು. ರೋಣ ಶಾಸಕ ಜಿ.ಎಸ್. ಪಾಟೀಲರು ಸಂಪೂರ್ಣ ಸಹಕಾರ ನೀಡಲು ಮುಂದಾಗಿದ್ದು, ರೋಣ ಭಾಗದ ಕೆರೆಗಳ ಹೂಳೆತ್ತುವ ಮೂಲಕ ರೈತರು ಆರ್ಥಿಕವಾಗಿ ಅಭಿವೃದ್ಧಿ ಸಾಧಿಸುವ ಉದ್ದೇಶವಿದೆ ಎಂದರು.

ಈ ಸಂದರ್ಭದಲ್ಲಿ ಯುಸೂಫ್ ಇಟಿ, ಮಹೇಶ ಗಡಗಿ, ಬಸುರಾಜ ಪೂಜಾರ, ಸಿದ್ದಪ್ಪ ಹಡಪದ, ಸುರೇಶ ಗಡಗಿ, ಬಸುರಡ್ಡಿ ಬಂಡಿಹಾಳ, ಶರಣು ಬಂಡಿಹಾಳ, ಮರಿಯಪ್ಪ ಸಿದ್ದಣ್ಣವರ, ಜಾಕೀರ ಮೂಲಿಮನಿ, ನಾಗೇಶ ಧರ್ಮಾಧಿಕಾರಿ, ಗವಿಸಿದ್ದಪ್ಪ ಬಿಸನಳ್ಳಿ, ನೂರಹಮ್ಮದ ಸರ್ಕವಾಸ, ಬಾಬು ಸರ್ಕವಾಸ, ಬಸವರಾಜ ಶಿರೋಳ, ಇಬ್ರಾಹಿಂ ಹೋಸಪೇಟಿ, ಅನಿಲ ಪಲ್ಲೇದ, ಮಾರುತಿ ಹೊಂಬಳ, ಮಲ್ಲಿಕಾರ್ಜುನ ಪ್ಯಾಟಿ, ರಂಗಪ್ಪ ಜೊಂಡಿ, ಇಒ ಮಂಜುನಾಥ ಹೋಸಮನಿ, ಸಣ್ಣ ನೀರಾವರಿ ಇಲಾಖೆ ಸಹಾಯಕ ಅಭಿಯಂತರ ಶರಣು ಪೂಜಾರ ಇದ್ದರು.

# ಬೆಳೆಗಳ ರೋಗ ಪರಿಹಾರಕ್ಕೆ ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಮುಂಗಾರು ಹಂಗಾಮಿನ ಹೆಸರು, ಗೋವಿನ ಜೋಳ ಬೆಳೆಗಳಲ್ಲಿ ಕಂಡುಬರುವ ರೋಗ ಬಾಧೆ ಪರಿಹಾರ ಕಾರ್ಯಕ್ಕೆ ಹಂತ ಹಂತವಾಗಿ ರೈತರು ಮುಂದಾಗಬೇಕು ಎಂದು ಹುಲಕೋಟಿ ಕೃಷಿ ಇಲಾಖೆಯ ಸಹಾಯಕ ಕೃಷಿ ಅಧಿಕಾರಿ ರಾಜೇಶ್ವರಿ ಚಿನಿವಾಲರ ಹೇಳಿದರು.

ಅವರು ಪಟ್ಟಣದಲ್ಲಿ ಕೃಷಿ ಮಾಹಾವಿದ್ಯಾಲಯ ಮತ್ತು ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳ ತಂಡದವರೊಂದಿಗೆ ಜಂಟಿಯಾಗಿ ರೈತರ ಕ್ಷೇತ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿ, ಮುಂಗಾರು ಮಳೆ ಸಾಕಷ್ಟು ಪ್ರಮಾಣದಲ್ಲಿ ಸುರಿದಿದ್ದು, ತೇವಾಂಶ ಹೆಚ್ಚಾಗಿ ಹೆಸರು ಬೆಳೆಯಲ್ಲಿ ಅಲ್ಲಲ್ಲಿ ಕಾಂಡ ಕೊರಕ ಕೀಟದ ಬಾಧೆ ಕಂಡು ಬಂದಿದೆ. ಈ ಬಾಧೆಯಿಂದ ಬೆಳೆಗೆ ಪೋಷಕಾಂಶಗಳ ಪೂರೈಕೆ ಕಡಿಮೆಯಾಗಿ ಬೆಳೆ ಹಳದಿಯಾಗುತ್ತದೆ. ಕಟಾವಿಗೆ ಬಂದ ಬೆಳೆಗಳಿಗೆ ಕೀಟನಾಶಕ ಸಿಂಪರಣೆ ಅಗತ್ಯವಿಲ್ಲ. ಹೂವಿನ ಹಂತದಲ್ಲಿರುವ ಬೆಳೆಗಳಿಗೆ ಮಾತ್ರ ಕೀಟನಾಶಕ ಸಿಂಪಡಿಸುವುದು ಸೂಕ್ತ ಎಂದರು.

ಗದಗ ಕೃಷಿ ಉಪನಿರ್ದೇಶಕಿ ಜಿ.ಎಸ್. ಸ್ಫೂರ್ತಿ, ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವನವರ, ಮೇಘನಾ ನಾಡಗೇರ, ಧಾರವಾಡ ಕೃಷಿ ವಿಶ್ವವಿದ್ಯಾಲಯದ ಎಂ.ಡಿ. ಪಾಟೀಲ್, ಸಂಗಶೆಟ್ಟಿ ಬಾಲ್ಕೊಂಡೆ, ಮುಳಗುಂದ ರೈತ ಸಂಘದ ಅಧ್ಯಕ್ಷ ದೇವರಾಜ ಸಂಗನಪೇಟಿ, ಸೈಯದಲಿ ಶೇಖ, ಮುತ್ತಣ್ಣ ಬಳ್ಳಾರಿ, ಕಿರಣ ಕುಲಕರ್ಣಿ, ದೇವಪ್ಪ ಅಣ್ಣಿಗೇರಿ, ಬಸವರಾಜ ಕರಿಗಾರ, ಮಾಹಾಂತೇಶ ಲಾಳಿ, ದತ್ತಣ್ಣ ಯಳವತ್ತಿ ಇದ್ದರು.

## ಸಂಪಾದಕೀಯ

# ಪಾದಯಾತ್ರೆಗೆ ಪ್ರಾರಂಭದಲ್ಲೇ ವಿಘ್ನ

ಮೂಡಾ ಹಗರಣವನ್ನ ಮುಂದಿಟ್ಟುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮುಗಿಬಿದ್ದು ಪಾದಯಾತ್ರೆಗೆ ಮುಂದಾಗಿದ್ದ ಬಿಜೆಪಿಗೆ ಪ್ರಾರಂಭದಲ್ಲಿ ವಿಘ್ನ ಎದುರಾಗಿದೆ. ಲೋಕಸಭೆ ಚುನಾವಣೆ ಪೂರ್ವ ಮೈತ್ರಿ ಮಾಡಿಕೊಂಡಿರುವ ಜಾತ್ಯಾತೀತ ಜನತಾದಳ ಪಕ್ಷವು ತಾತ್ಕಾಲಿಕವಾಗಿ ಪಾದಯಾತ್ರೆಯನ್ನ ಮುಂದೂಡುವಂತೆ ಒತ್ತಾಯ ಮಾಡಿದೆ.

ಮೈತ್ರಿ ಪಕ್ಷದ ಮಾತಿಗೆ ಮಣೆದು ಬಿಜೆಪಿ ಪಾದಯಾತ್ರೆಯನ್ನ ಮುಂದೂಡುವ ನಿರ್ಧಾರಕ್ಕೆ ಬಂದಿದೆ. ಜೆಡಿಎಸ್ ಒತ್ತಾಯಕಿಂತ ಸ್ವಪಕ್ಷದವರ ಟೀಕೆಗಳು ಬಿಜೆಪಿಗೆ ಸಾಕಷ್ಟು ಇರಿಸು ಮುರಿಸು ತಂದಿದೆ. ಅದರಲ್ಲೂ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ, ಮತ್ತೊಮ್ಮೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಹರಿಹಾಯ್ದಿದ್ದು, ಡಿಕೆ ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲು ವಿಜಯೇಂದ್ರ ಪಾದಯಾತ್ರೆ ಮಾಡುತ್ತಿದ್ದಾರೆ ಎನ್ನುವ ಗಂಭೀರ ಆರೋಪ ಮಾಡಿರುವುದು ಸಂಚಲನ ಸೃಷ್ಟಿಸಿದೆ.

ಸದ್ಯ ರಾಜ್ಯದಲ್ಲಿ ಸುರಿಯುತ್ತಿರುವ ಮಳೆಯಿಂದ ಸಾಕಷ್ಟು ಅವಾಂತರಗಳು ಎದುರಾಗುತ್ತಿವೆ. ಆದರೂ ಬಿಜೆಪಿ ಜನರ ಕಷ್ಟಗಳನ್ನು ಅರಿಯುವುದನ್ನು ಬಿಟ್ಟು ಪಾದಯಾತ್ರೆ ರಾಜಕಾರಣಕ್ಕೆ ಮುಂದಾಗಿತ್ತು. ಈ ಬಗ್ಗೆ ಸ್ವಪಕ್ಷದ ಕೆಲಸವೇ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. ಇದರ ಮಧ್ಯೆಯೂ ಬಿಜೆಪಿ ರಾಜ್ಯ ಘಟಕ ಪಾದಯಾತ್ರೆ ಮಾಡುವ ನಿರ್ಣಯ ಕೈಗೊಂಡಿತು.

ಆದರೆ ಮೈತ್ರಿ ಪಕ್ಷ ಜೆಡಿಎಸ್ ಪಾದಯಾತ್ರೆಗೆ ವಿರೋಧವನ್ನ ವ್ಯಕ್ತಪಡಿಸಿ, ಬಿಜೆಪಿ ನಾಯಕರಿಗೆ ಬಿಸಿ ಮುಟ್ಟಿಸಿದ್ದಾರೆ. ಸದ್ಯಕ್ಕೆ ರಾಜ್ಯದಲ್ಲಿ ಮಳೆಯಾಗುತ್ತಿರುವ ಕಾರಣ ಜನ ಸಂಕಷ್ಟದಲ್ಲಿದ್ದಾರೆ. ಜನಪ್ರತಿನಿಧಿಗಳು ಜನರ ಸಂಕಷ್ಟಕ್ಕೆ ಸ್ಪಂದಿಸಬೇಕು. ಹೀಗಾಗಿ ಪರಿಸ್ಥಿತಿ ತಿಳಿದುಕೊಂಡ ನಂತರ ಪಾದಯಾತ್ರೆ ಮಾಡುವುದು ಒಳ್ಳೆಯದು ಎನ್ನುವ ಸಲಹೆಯನ್ನ ಜೆಡಿಎಸ್ ನಾಯಕರು ಬಿಜೆಪಿಗೆ ನೀಡಿದ್ದಾರೆ.

ಮೇಲ್ನೋಟಕ್ಕೆ ಮಳೆ ಕಾರಣವಾಗಿದ್ದರು ಹಳೆ ಮೈಸೂರು ಭಾಗದಲ್ಲಿ ಬಿಜೆಪಿ ಬಲಿಷ್ಠ ಗೊಳ್ಳುವುದು ಜೆಡಿಎಸ್ ಗೆ ಬೇಕಾಗಿಲ್ಲ. ಮೈತ್ರಿ ಮೂಲಕ ಹಳೆ ಮೈಸೂರು ಭಾಗದಲ್ಲಿ ಜೆಡಿಎಸ್ ಪ್ರಾಬಲ್ಯ ಮರು ಸೃಷ್ಟಿಸುವ ಇರಾದೆ ಹೊಂದಿರುವ ಜೆಡಿಎಸ್ ವರಿಷ್ಠರು, ಬಿಜೆಪಿ ಚಟುವಟಿಕೆಗೆ ತಡೆ ನೀಡುವ ಕೆಲಸ ಆರಂಭಿಸಿದ್ದಾರೆ. ಒಟ್ಟಾರೆ ಪಾದಯಾತ್ರೆಗೆ ಪ್ರಾರಂಭದಲ್ಲಿ ವಿಘ್ನ ಎದುರಾಗಿರುವುದು ಬಿಜೆಪಿಗೆ ಶುಭ ಸೂಚನೆ ಅಲ್ಲ.

### ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ ಕಲಗೌಡ ಪಾಟೀಲ

# ಅದ್ಧೂರಿ ಸ್ವಾತಂತ್ರ್ಯ ದಿನಾಚರಣೆಗೆ ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಆಗಸ್ಟ್ 15ರಂದು ಬೆಳಿಗೆ 7.30ಕ್ಕೆ ತಾಲೂಕು ಆಡಳಿತ ಸೌಧದಲ್ಲಿ ಹಾಗೂ ಬೆಳಿಗ್ಗೆ 9 ಗಂಟೆಗೆ ನೆಹರು ಮೈದಾನದಲ್ಲಿ ತಾಲೂಕು ಆಡಳಿತದಿಂದ ಸ್ವಾತಂತ್ರ್ಯ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ ಹೇಳಿದರು.



ಬುಧವಾರ ತಾಲೂಕು ಆಡಳಿತ ಸೌಧದ ತಹಸೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪೊಲೀಸ್, ಗೃಹ ರಕ್ಷಕ, ಎನ್‌ಸಿಸಿ, ಎನ್‌ಎಸ್‌ಎಸ್ ದಳಗಳು ಪಥ ಸಂಚಲನದಲ್ಲಿ ಭಾಗವಹಿಸಲಿವೆ. 20ಕ್ಕೂ ಅಧಿಕ ಶಾಲೆಗಳ ತಂಡಗಳು ಸಹ ಪಥ ಸಂಚಲನದಲ್ಲಿ ಪಾಲ್ಗೊಳ್ಳಬೇಕು. ಜನಪದ ಮತ್ತು ಹಳ್ಳಿ ಸೊಗಡಿನ ಸಾಂಸ್ಕೃತಿಕ ಕಾರ್ಯಕ್ರಗಳಿಗೆ ಆದ್ಯತೆ ನೀಡಲಾಗುತ್ತದೆ. ಆದ್ದರಿಂದ ದೇಶಭಕ್ತಿ ಸಾರುವ ಗೀಗೀ ಪದ, ಲಾವಣಿ ಪದ, ಕಿರು ನಾಟಕ, ನೃತ್ಯಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುವುದು. ಪಥ ಸಂಚಲನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ತಂಡಗಳಿಗೆ ಪ್ರಶಸ್ತಿ, ಪ್ರಮಾಣಪತ್ರಗಳನ್ನು ವಿತರಿಸಲಾಗುವುದು. ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಗುತ್ತದೆ ಎಂದು ತಿಳಿಸಿದರು.

ಎಲ್ಲಾ ಸರ್ಕಾರಿ ಕಚೇರಿ, ಗ್ರಾಮ ಪಂಚಾಯಿತಿಗಳಲ್ಲಿ ಗಾಂಧೀಜಿ, ಅಂಬೇಡ್ಕರ್ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ, ತಾಲೂಕಿನಲ್ಲಿರುವ ಎಲ್ಲಾ ಸರ್ಕಾರಿ ಕಚೇರಿಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಒಂದೇ ಅಳತೆಯ ಭಾವಚಿತ್ರಗಳನ್ನು ಇಟ್ಟು ಪೂಜೆ ಸಲ್ಲಿಸಬೇಕು. ಅನುಭವಿಕರಿಂದ ರಾಷ್ಟ್ರಧ್ವಜವನ್ನು ಸರಿಯಾಗಿ ಕಟ್ಟುವಂತೆ ನಿಗಾ ವಹಿಸಬೇಕು. ಯಾವುದೇ ರೀತಿಯಲ್ಲಿ ಧ್ವಜವನ್ನು ಅಗೌರವ ತೋರುವ ರೀತಿಯಲ್ಲಿ ಕಟ್ಟಬಾರದು. ಶಾಲಾ ವಿದ್ಯಾರ್ಥಿಗಳ ಜೊತೆಗೆ ಪಾಲಕರು, ಕುಟುಂಬ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು. ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ತಹಸೀಲ್ದಾರ ಪ್ರಕಾಶ ನಾಶಿ ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಪ್ರಕಾಶ ನಾಶಿ ಮಾತನಾಡಿ, ಪಥ ಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳನ್ನು ಬಸ್ ಮೂಲಕ ನೆಹರು ಮೈದಾನಕ್ಕೆ ಕರೆತರುವ ವ್ಯವಸ್ಥೆ ಮಾಡಬೇಕು. ದೇಶಭಕ್ತಿಯ ಕನ್ನಡ ಗೀತೆಗಳನ್ನು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಬಳಸಬೇಕು. ಕುಡಿಯುವ ನೀರು, ಉಪಹಾರ, ಸಾರಿಗೆ ವ್ಯವಸ್ಥೆ, ಅಗ್ನಿಶಾಮಕ, ಆರೋಗ್ಯ ಸಿಬ್ಬಂದಿ, ಆಂಬ್ಯುಲೆನ್ಸ್ ಸೇರಿದಂತೆ ಅಗತ್ಯ ಸೌಕರ್ಯಗಳನ್ನು ಆಯಾ ಇಲಾಖೆಗಳಿಗೆ ವಹಿಸಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಯಾವುದೇ ರೀತಿಯಲ್ಲಿ ತೊಂದರೆಗಳು ಆಗಬಾರದು ಎಂದು ಅವರು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಹಿಂದುಳಿದ ವರ್ಗಗಳ ತಾಲೂಕು ಕಲ್ಯಾಣಾಧಿಕಾರಿ ಸಿ.ವಿ. ಕರವೀರಮಠ, ಗೃಹ ರಕ್ಷಕ ದಳದ ಕೃಷ್ಣಾ ಬ್ಯಾಡಗಿ, ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರಾದ ಪ್ರಭುಲಿಂಗ ಗಡ್ಡದ ಸೇರಿದಂತೆ ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕೂಗಳಿಗೆ 2024–25ನೇ ಸಾಲಿನ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ಮಾವು, ದಾಳಿಂಬೆ, ಪಪ್ಪಾಯ ಬೆಳೆಗಳಿಗೆ ಜು.31 ಕೊನೆ ದಿನವಾಗಿದ್ದು, ರೈತರು ವಿಮಾ ಕಂತಿನ ಹಣವನ್ನು ತಾಲೂಕಿನ ಬ್ಯಾಂಕ್ ಮತ್ತು ಕಾಮನ್ ಸರ್ವಿಸ್ ಸೆಂಟರ್‌ಗಳಲ್ಲಿ ಪಾವತಿ ಮಾಡಬಹುದಾಗಿದೆ ಎಂದು ಶಿರಹಟ್ಟಿಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ ತಿಳಿಸಿದ್ದಾರೆ.

ಪ್ರತಿ ಹೆಕ್ಟೇರ್ ಮಾವಿಗೆ 4 ಸಾವಿರ ರೂ, ದಾಳಿಂಬೆಗೆ 14 ಸಾವಿರ ರೂ ಮತ್ತು ಪಪ್ಪಾಯ ಬೆಳೆಗೆ 6700 ರೂದಂತೆ ವಿಮಾ ಮೊತ್ತವನ್ನು ಪಾವತಿ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಇರಾನ್‌ನಲ್ಲಿ ಹಮಾಸ್ ಸರ್ವೋಚ್ಚ ನಾಯಕ ಇಸ್ಮಾಯಿಲ್ ಹನಿಯೆಹ್ ಹತ್ಯೆ; ಇಸ್ರೇಲ್ ಅನ್ನು ದೂಷಿಸಿದ ಐಆರ್‌ಜಿಸಿ

■ವಿಜಯಸಾಕ್ಷಿ ಸುದ್ದಿ, ಹಮಾಸ್



ಹಮಾಸ್ ನಾಯಕ ಇಸ್ಮಾಯಿಲ್ ಹನಿಯೆಹ್ ಬುಧವಾರ ಇರಾನ್‌ನಲ್ಲಿ ಕೊಲ್ಲಲ್ಪಟ್ಟಿದ್ದಾರೆ ಎಂದು ಹಮಾಸ್ ಮತ್ತು ಇರಾನ್‌ನ ಎಲೈಟ್ ರೆವೆಲ್ಯೂಷನರಿ ಗಾರ್ಡ್ಸ್ (ಐಆರ್‌ಜಿಸಿ) ಪ್ರತ್ಯೇಕ ಹೇಳಿಕೆಗಳಲ್ಲಿ ತಿಳಿಸಿವೆ.

ಹನಿಯೆಹ್ ಸಾವಿಗೆ ತೀವ್ರ ದುಖಃ ವ್ಯಕ್ತಪಡಿಸಿರುವ ಹಮಾಸ್, ಮಂಗಳವಾರ ಬೆಳಿಗ್ಗೆ ಟೆಹ್ರಾನ್‌ನಲ್ಲಿರುವ ನಿವಾಸದ ಮೇಲೆ ನಡೆದ ವಿಶ್ವಾಸಘಾತುಕ ಝಿಯೋನಿಸ್ಟ್ ದಾಳಿಯಲ್ಲಿ ಹನಿಯೆಹ್ ಸಾವನ್ನಪ್ಪಿದ್ದಾರೆ ಎಂದು ಹೇಳಿದೆ.

ಮಂಗಳವಾರ ನಡೆದ ಇರಾನ್‌ನ ನೂತನ ಅಧ್ಯಕ್ಷ ಮಸೂದ್ ಪೆಝೆಶ್ಕಿಯಾನ್ ಅವರ ಪ್ರಮಾಣ ವಚನ ಸಮಾರಂಭದಲ್ಲಿ ಹನಿಯೆಹ್ ಭಾಗವಹಿಸಿದ್ದರು.

ಇಂದು ಮುಂಜಾನೆ, ಟೆಹ್ರಾನ್‌ನಲ್ಲಿರುವ ಇಸ್ಮಾಯಿಲ್ ಹನಿಯೆ ಅವರ ನಿವಾಸದ ಮೇಲೆ ದಾಳಿ ನಡೆದಿದ್ದು, ಪರಿಣಾಮ ಹನಿಯೆಹ್ ಮತ್ತು ಅವರ ಅಂಗರಕ್ಷಕರಲ್ಲಿ ಒಬ್ಬರು ಹುತಾತ್ಮರಾಗಿದ್ದಾರೆ. ಘಟನೆಯ ಕುರಿತು ತನಿಖೆ ನಡೆಯುತ್ತಿದೆ.

ಈ ಬಗ್ಗೆ ಹೆಚ್ಚಿನ ಮಾಹಿತಿ ಶೀಘ್ರದಲ್ಲೇ ನೀಡಲಾಗುವುದು” ಎಂದು ಎಲೈಟ್ ರೆವೆಲ್ಯೂಷನರಿ ಗಾರ್ಡ್ಸ್ ಮಂಗಳವಾರ ತಿಳಿಸಿದೆ.

ಕಳೆದ ಏಪ್ರಿಲ್‌ನಲ್ಲಿ, ಗಾಝಾದಲ್ಲಿ ವಾಹನದ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯೊಂದರಲ್ಲಿ ಹನಿಯೆಹ್ ಅವರ ಮೂವರು ಪುತ್ರರು ಮತ್ತು ನಾಲ್ವರು ಮೊಮ್ಮಕ್ಕಳು ಕೊಲ್ಲಲ್ಪಟ್ಟಿದ್ದರು. ಗಾಝಾದ ಅಲ್-ಶಾತಿ ಶಿಬಿರದ ಬಳಿ ಅವರು ಚಲಾಯಿಸುತ್ತಿದ್ದ ಕಾರಿಗೆ ಬಾಂಬ್ ದಾಳಿ ನಡೆಸಿ, ಹನಿಯೆಹ್ ಅವರ ಮೂವರು ಪುತ್ರರಾದ ಹಝೆಮ್, ಅಮೀರ್ ಮತ್ತು ಮೊಹಮ್ಮದ್ ಅನ್ನು ಹತ್ಯೆ ಮಾಡಲಾಗಿತ್ತು. ಹಮಾಸ್ ನಡೆಸುತ್ತಿರುವ ಮಾಧ್ಯಮಗಳ ಪ್ರಕಾರ, ದಾಳಿಯಲ್ಲಿ ಅವರ ನಾಲ್ವರು ಮೊಮ್ಮಕ್ಕಳೂ ಸಾವನ್ನಪ್ಪಿದ್ದಾರೆ.

ಕಳೆದ ತಿಂಗಳು, ಹಮಾಸ್ ಮುಖ್ಯಸ್ಥ ಸಹೋದರಿ ಸೇರಿದಂತೆ ತನ್ನ ಕುಟುಂಬದ ಹತ್ತು ಸದಸ್ಯರನ್ನು ಕಳೆದುಕೊಂಡಿದ್ದರು. ಗಾಝಾ ನಗರದಲ್ಲಿ ನಡೆದ ಮತ್ತೊಂದು ಆಪಾದಿತ ಇಸ್ರೇಲಿ ವೈಮಾನಿಕ ದಾಳಿಯಲ್ಲಿ ಅವರು ಕೊಲ್ಲಟ್ಟಿದ್ದರು.

ಇಸ್ರೇಲ್‌ನಲ್ಲಿ ವಾಸಿಸುವ ಹನಿಯೆಹ್ ಅವರ ಇನ್ನೊಬ್ಬ ಸಹೋದರಿಯುನ್ನೂ ಏಪ್ರಿಲ್‌ನಲ್ಲಿ ಭಯೋತ್ಪಾದಕ ಗುಂಪಿನ ಸಂಪರ್ಕ ಮತ್ತು ಭಯೋತ್ಪಾದಕ ಕೃತ್ಯಗಳ ಆರೋಪ ಹೊರಿಸಿ ಬಂಧಿಸಲಾಗಿತ್ತು.

# ಬಿಜೆಪಿ ಪಾದಯಾತ್ರೆಗೆ ಜೆಡಿಎಸ್ ಬೆಂಬಲ ಇಲ್ಲ; ಕಟುವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಿವೇಶನ ಹಂಚಿಕೆ ವಿಚಾರವಾಗಿ ನಡೆದಿದೆ ಎನ್ನಲಾದ ಹಗರಣ ವಿರೋಧಿಸಿ, ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪಾದಯಾತ್ರೆ ನಡೆಸಲು ಸಿದ್ಧವಾಗಿರುವ ಬಿಜೆಪಿ ನಡೆಗೆ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.

ನವದೆಹಲಿಯಲ್ಲಿ ಬುಧವಾರ ಸುದ್ದಿಗಾರರ ಜತೆಗೆ ಮಾತನಾಡಿದ ಅವರು, “ಪಾದಯಾತ್ರೆ ಬಗ್ಗೆ ಬಿಜೆಪಿ ಏಕಪಕ್ಷೀಯವಾಗಿ ತೀರ್ಮಾನ ತೆಗೆದುಕೊಂಡಿದೆ. ಇದಕ್ಕೆ ಜೆಡಿಎಸ್‌ನಿಂದ ಯಾವುದೇ ನೈತಿಕ ಬೆಂಬಲ ಇಲ್ಲ” ಎಂದು ಸ್ಪಷ್ಟಪಡಿಸಿದ್ದಾರೆ.

“ಬಿಜೆಪಿ ನಡೆಸುತ್ತಿರುವ ಪಾದಯಾತ್ರೆಗೆ ಜೆಡಿಎಸ್ ಬೆಂಬಲ ನೀಡುತ್ತಿಲ್ಲ. ನಮ್ಮ ಕುಟುಂಬಕ್ಕೆ ವಿಷ ಹಾಕಿದವರ ಜತೆಗೆ ಪಾದಯಾತ್ರೆಯಲ್ಲಿ ನಾವು ಭಾಗಿಯಾಗಬೇಕಾ?”



ಎಂದು ಪರೋಕ್ಷವಾಗಿ ಬಿಜೆಪಿ ವಿರುದ್ಧ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ದಾಖಲಾಗಿರುವ ಲೈಂಗಿಕ ದೌರ್ಜನ್ಯ ಪ್ರಕರಣ ವಿಚಾರವಾಗಿ ಮಾಜಿ ಶಾಸಕ ಪ್ರೀತಂ ಗೌಡ ವಿರುದ್ಧ ಹರಿಹಾಯ್ದಿರುವ ಅವರು, “ಪ್ರೀತಮ್ ಗೌಡ ಯಾರು. ಹಾಸನದಲ್ಲಿ ಬೀದಿ ಬೀದಿಗಳಲ್ಲಿ ಪೆನ್‌ಡ್ರೈವ್ ಸಿಗಲು ಕಾರಣನಾದ ವ್ಯಕ್ತಿ. ಆತನ ಜತೆಗೆ ನಾನು ವೇದಿಕೆ ಹಂಚಿಕೊಳ್ಳಬೇಕಾ? ನಮ್ಮ ಕುಟುಂಬಕ್ಕೆ ವಿಷ ಹಾಕಿದವರ ಜತೆಗೆ ಪಾದಯಾತ್ರೆಯಲ್ಲಿ ಭಾಗಿಯಾಗಬೇಕಾ? ಎಂದಿದ್ದಾರೆ.

ವಿಶ್ವಾಸಕ್ಕೆ ತೆಗೆದುಕೊಳ್ಳದ ಕಾರಣ ಬೆಂಬಲ ಇಲ್ಲ

“ಪಾದಯಾತ್ರೆ ಬಗ್ಗೆ ಬಿಜೆಪಿಯರೇ ತೀರ್ಮಾನ ತೆಗೆದುಕೊಂಡಿದ್ದಾರೆ. ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದ ಕಾರಣ ನಾವು ಬೆಂಬಲ ನೀಡುತ್ತಿಲ್ಲ. ಈ ವಿಚಾರದಿಂದ ನನ್ನ ಮನಸ್ಸಿಗೂ ನೋವಾಗಿದೆ” ಎಂದು ತಿಳಿಸಿದ್ದಾರೆ.

“ಕೇರಳದಲ್ಲಿ ನೂರಾರು ಜನರ ಜೀವ ಹಾನಿಯಾಗಿದೆ. ಕರ್ನಾಟಕದಿಂದ ಹೋದವರು ವಾಪಸ್ ಬರಲು ಸಮಸ್ಯೆ ಎದುರಿಸುತ್ತಿದ್ದಾರೆ. ರಾಜ್ಯದಲ್ಲೂ ಯೆಲ್ಲೋ ಮತ್ತು ರೆಡ್ ಅಲರ್ಟ್ ಘೋಷಣೆ ಆಗಿದೆ. ಹಲವು ಪ್ರದೇಶಗಳು ಜಲಾವೃತವಾಗಿವೆ. ಎಲ್ಲರೂ ಕೃಷಿ ಚಟುವಟಿಕೆಯಲ್ಲಿ ಭಾಗವಹಿಸುವ ಈ ಸಮಯದಲ್ಲಿ ಪಾದಯಾತ್ರೆಯ ಅವಶ್ಯಕತೆಯೇ ಇಲ್ಲ” ಎಂದು ಹೇಳಿದ್ದಾರೆ.

# ನಮ್ಮ ಕುಟುಂಬಕ್ಕೆ ವಿಷ ಹಾಕಿದವರ ಜೊತೆ ನಾನು ವೇದಿಕೆ ಹಂಚಿಕೊಳ್ಳಬೇಕಾ? ಹೆಚ್‌ಡಿಕೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿ ಹಮ್ಮಿಕೊಂಡಿರುವ ಪಾದಯಾತ್ರೆಗೆ ಜೆಡಿಎಸ್ ಬೆಂಬಲ ನೀಡುತ್ತಿಲ್ಲ. ನಮ್ಮ ಕುಟುಂಬಕ್ಕೆ ವಿಷ ಹಾಕಿದವರ ಜೊತೆ ಪಾದಯಾತ್ರೆಯಲ್ಲಿ ಪಾಲ್ಗೊಳ್ಳಬೇಕಾ? ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಾದಯಾತ್ರೆಗೆ ಬಿಜೆಪಿ ಏಕಪಕ್ಷೀಯ ತೀರ್ಮಾನ ಕೈಗೊಂಡಿದೆ. ಬೆಂಗಳೂರಿನಿಂದ ಮೈಸೂರಿನವರೆಗೆ ನಮ್ಮ ಶಕ್ತಿಯಿದೆ. ಆದರೆ, ನಮ್ಮನ್ನು ಸರಿಯಾಗಿ ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ. ಇದರಿಂದ ನನ್ನ ಮನಸ್ಸಿಗೆ ನೋವಾಗಿದೆ.



ಹೀಗಿರುವಾಗ ನಾವ್ಯಾಕೆ ಬೆಂಬಲ ಕೊಡಬೇಕು? ಎಂದಿದ್ದಾರೆ.

ಪ್ರೀತಂಗೌಡ ಅವರನ್ನು ಮುಂದಿಟ್ಟುಕೊಂಡು ಪಾದಯಾತ್ರೆ ನಡೆಸಲು ಮುಂದಾಗಿದ್ದಾರೆ. ಈ ಪ್ರೀತಂಗೌಡ ಯಾರು? ಹಾಸನದ ಬೀದಿ ಬೀದಿಗಳಲ್ಲಿ ಪೆನ್‌ಡ್ರೈವ್ ಸಿಗಲು ಕಾರಣನಾದ ವ್ಯಕ್ತಿ ಆತ. ಆತನ ಜೊತೆ ನಾನು ವೇದಿಕೆ ಹಂಚಿಕೊಳ್ಳಬೇಕಾ? ನಮ್ಮ ಕುಟುಂಬಕ್ಕೆ ವಿಷ ಹಾಕಿದವರ ಜೊತೆ ಪಾದಯಾತ್ರೆಯಲ್ಲಿ ಭಾಗಿಯಾಗಬೇಕಾ? ಎಂದು ಕೇಳಿದ್ದಾರೆ.

ವಾಲ್ಮಿಕಿ ಅಭಿವೃದ್ಧಿ ನಿಗಮ ಮತ್ತು ಮುಡಾ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿರುವ ಬಿಜೆಪಿ ಮತ್ತು ಜೆಡಿಎಸ್ ನಾಯಕರು, ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಆಗಸ್ಟ್ 3ರಿಂದ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ನಡೆಸುವುದಾಗಿ ಘೋಷಿಸಿದ್ದರು.

ಆಗಸ್ಟ್ 10ರಂದು ಮೈಸೂರಿನಲ್ಲಿ ಪಾದಯಾತ್ರೆಯ ಸಮಾರೋಪ ಸಮಾರಂಭ ನಡೆಯಲಿದೆ ಎಂದಿದ್ದರು. ಈ ನಡುವೆ ಕುಮಾರಸ್ವಾಮಿ ಹೇಳಿಕೆ ನೀಡಿದ್ದಾರೆ.

# ಅನುರಾಗ್ ಠಾಕೂರ್ ಭಾಷಣಕ್ಕೆ ಬೆಂಬಲ ವ್ಯಕ್ತಪಡಿಸಿದ ಪ್ರಧಾನಿ ಮೋದಿ : ಹಕ್ಕುಚ್ಯುತಿ ದೂರು ನೀಡಿದ ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ರಾಹುಲ್ ಗಾಂಧಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿ ಸಂಸದ ಅನುರಾಗ್ ಠಾಕೂರ್ ಅವರ ಭಾಷಣವನ್ನು ಬೆಂಬಲಿಸಿರುವ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಪ್ರತಿಪಕ್ಷಗಳು ಹಕ್ಕುಚ್ಯುತಿ ದೂರು ನೀಡಿದೆ.

ಜಲಂಧರ್ ಸಂಸದ ಹಾಗೂ ಪಂಜಾಬ್‌ನ ಮಾಜಿ ಮುಖ್ಯಮಂತ್ರಿ ಚರಂಜಿತ್ ಸಿಂಗ್ ಚನ್ನಿ ಲೋಕಸಭೆಯ ಪ್ರಧಾನ ಕಾರ್ಯದರ್ಶಿಗೆ ದೂರು ಸಲ್ಲಿಸಿದ್ದಾರೆ.

“ಅನುರಾಗ್ ಠಾಕೂರ್ ಅವರು ರಾಹುಲ್ ಗಾಂಧಿ ವಿರುದ್ಧ ನೀಡಿರುವ ಆಕ್ಷೇಪಾರ್ಹ ಹೇಳಿಕೆಗಳನ್ನು ಲೋಕಸಭೆಯ ಕಡತದಿಂದ ತೆಗೆಯಲಾಗಿದೆ. ಆದರೆ, ಪ್ರಧಾನಿಯವರ ತಮ್ಮ ಎಕ್ಸ್ ಖಾತೆಯಲ್ಲಿ ಆಕ್ಷೇಪಾರ್ಹ ಅಂಶಗಳಿರುವ ಸಂಪೂರ್ಣ ಭಾಷಣದ ವಿಡಿಯೋ ಹಂಚಿಕೊಂಡಿದ್ದಾರೆ. ಕೌಲ್ ಮತ್ತು ಶಕ್ಧರ್ ಅವರೂ ಕೂಡ ಆಕ್ಷೇಪಾರ್ಹ ಅಂಶಗಳಿರುವ ವಿಡಿಯೋ ಶೇರ್ ಮಾಡಿದ್ದಾರೆ” ಎಂದು ಚರಂಜಿತ್ ಸಿಂಗ್ ಚನ್ನಿ ದೂರಿನಲ್ಲಿ ತಿಳಿಸಿದ್ದಾರೆ.

ಕಡತದಿಂದ ತೆಗೆದು ಹಾಕಿರುವ ಅಂಶಗಳಿಲ್ಲದ ಭಾಷಣವನ್ನು ಆನ್‌ಲೈನ್ ನಲ್ಲಿ ಅಪ್ಲೋಡ್ ಮಾಡಬೇಕು ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಮನವಿ ಮಾಡಿದರೂ, ಸಂಸದ್ ಟಿವಿಯು ಎಡಿಟ್ ಮಾಡದಿರುವ ಭಾಷಣವನ್ನೇ ಅಪ್ಲೋಡ್ ಮಾಡಿದೆ.

# ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪುರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್ .ಎಸ್.ಎಲ್.ಸಿ ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಇರುವ ಮೊದಲ ವರ್ಷದ ಡಿಪ್ಲೋಮಾ ಸೀಟುಗಳಿಗೆ ಹಾಗೂ ಐ.ಟಿ.ಐ/ ಪಿ.ಯು.ಸಿ ( ವಿಜ್ಞಾನ ) ಪಾಸಾದ ವಿದ್ಯಾರ್ಥಿಗಳಿಗೆ 3ನೇ ಸೆಮಿಸ್ಟರ್ ಲ್ಯಾಟರಲ್ ಎಂಟ್ರಿ ಖಾಲಿ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ ಆಫ್ ಲೈನ್ ಮೂಲಕ ಮೆರಿಟ್ ಹಾಗೂ ರೋಸ್ಟರ್ ಆಧಾರದ ಮೇರೆಗೆ ಡಿಪ್ಲೋಮಾ ಪ್ರವೇಶ ಪಡೆಯುವ ಕೊನೆಯ ದಿನಾಂಕವನ್ನು ಆಗಸ್ಟ್ 6 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಯನ್ನು ಗದಗ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು, ನಾಗಸಮುದ್ರ ರಸ್ತೆ, ನರಸಾಪೂರ, ಗದಗ ಇಲ್ಲಿ ಸಂಪರ್ಕಿಸಬಹುದಾಗಿದೆ.

# ರಾಜಸ್ಥಾನದಿಂದ ಸರಬರಾಜಾಗುತ್ತಿದ್ದ ಮಾಂಸ ‘ಕುರಿ’ಯದ್ದು: ದಿನೇಶ್ ಗುಂಡೂರಾವ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

‘ರಾಜಸ್ಥಾನದಿಂದ ಸರಬರಾಜಾಗುತ್ತಿದ್ದ ಮಾಂಸವು ‘ಕುರಿ’ಯದ್ದೇ ಆಗಿದೆ’ ಎಂಬುದನ್ನು ಪ್ರಯೋಗಾಲಯವು ಖಚಿತಪಡಿಸಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಖಚಿತಪಡಿಸಿದ್ದಾರೆ.

ಈ ಬಗ್ಗೆ ಲ್ಯಾಬ್ ವರದಿ ಬಹಿರಂಗಪಡಿಸಿರುವ ಸಚಿವರು “ರಾಜಸ್ಥಾನದಿಂದ ಸರಬರಾಜಾಗುತ್ತಿದ್ದ ಮಾಂಸದ ಕುರಿತಾದ ಘಟನೆಗಳ ಹಿನ್ನೆಲೆಯಲ್ಲಿ ರೈಲುಗಳಲ್ಲಿ ಬಂದಿದ್ದ ಮಾಂಸದ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಗಳಿಗೆ ಕಳುಹಿಸಲಾಗಿತ್ತು. ಇದೀಗ ಪ್ರಯೋಗಾಲಯಗಳಿಂದ ಪರೀಕ್ಷಾ ವರದಿ ಬಂದಿದ್ದು, ರಾಜಸ್ಥಾನದಿಂದ ಬಂದ ಮಾಂಸವು ‘ಕುರಿ’ಯದ್ದೇ ಆಗಿದೆ ಎಂಬುದನ್ನು ಪ್ರಯೋಗಾಲಯವು ಖಚಿತಪಡಿಸಿದೆ. ಈ ಹಿನ್ನೆಲೆಯಲ್ಲಿ ಯಾವುದೇ ಅನಗತ್ಯ ಗೊಂದಲ ಸೃಷ್ಟಿಸದಂತೆ ಮತ್ತು ಈ ಕುರಿತ ಗಾಳಿ ಸುದ್ದಿಗಳಿಗೆ ಕಿವಿಗೊಡದಂತೆ ನಾನು ಸಾರ್ವಜನಿಕರಲ್ಲಿ ವಿನಂತಿಸುತ್ತೇನೆ” ಎಂದು ಮನವಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಕಳೆದ ಶುಕ್ರವಾರ (ಜುಲೈ 26) ನಾಯಿ ಮಾಂಸ ಸಾಗಣೆ ಸಾಗಾಣೆ ಮಾಡಲಾಗುತ್ತಿದೆ ಎಂದು ಹಿಂದುತ್ವ ಸಂಘಟನೆಗಳ ಕೆಲವರು ವಿವಾದ ಸೃಷ್ಟಿಸಿದ್ದರು. ಜೈಪುರದಿಂದ ರೈಲಿನಲ್ಲಿ ಬಂದ ಸುಮಾರು 2,700 ಕೆಜಿ ಮಾಂಸವನ್ನು ಹೊಂದಿದ್ದ 90 ಇನ್ಸುಲೇಟೆಡ್ ಬಾಕ್ಸ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ರೈಲು ನಿಲ್ದಾಣದಲ್ಲಿ ಜಮಾಯಿಸಿದ ಕಾರ್ಯಕರ್ತರು, ನಾಯಿ ಮಾಂಸ ಸಾಗಾಟವನ್ನು ವಿರೋಧಿಸಿ ಪ್ರತಿಭಟನೆ ನಡೆಸಿದರು.

“ರಾಜಸ್ಥಾನದಿಂದ ಬೆಂಗಳೂರಿಗೆ ರೈಲಿನ ಮೂಲಕ ಕುರಿಮರಿ ಮತ್ತು ಇತರ ಪ್ರಾಣಿಗಳ ಮಾಂಸವನ್ನು ಸಾಗಿಸಲಾಗುತ್ತಿದೆ ಎಂಬ ಇತ್ತೀಚಿನ ಮಾಧ್ಯಮ ವರದಿಗಳ ನಂತರ, ವೈಜ್ಞಾನಿಕ ಪರಿಶೀಲನೆಯ ಮೂಲಕ ಈ ವಿಷಯವನ್ನು ಕೂಲಂಕಷವಾಗಿ ತನಿಖೆ ಮಾಡಲು ನಾವು ಬದ್ಧರಾಗಿದ್ದೇವೆ. ನಿಖರತೆಯನ್ನು ಖಚಿತಪಡಿಸಿಕೊಳ್ಳಲು. ನಿಖರವಾದ ಪ್ರಯೋಗಾಲಯದ ವಿಶ್ಲೇಷಣೆಗಾಗಿ ನಾವು ಒಟ್ಟು 84 ಪಾರ್ಸೆಲ್‌ಗಳನ್ನು ಹೈದರಾಬಾದ್‌ನಲ್ಲಿರುವ ಐಸಿಎಆರ್-ನ್ಯಾಷನಲ್ ಮೀಟ್ ರಿಸರ್ಚ್ ಇನ್‌ಸ್ಟಿಟ್ಯೂಟ್‌ಗೆ ಕಳುಹಿಸಿದ್ದೇವೆ” ಎಂದು ಹೇಳಿದ್ದರು.

ನಾಯಿ ಮಾಂಸ ವಿವಾದದಲ್ಲಿ ಎಫ್‌ಐಆರ್

ಈ ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಮೂರು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು, ”ಮೊದಲ ಎಫ್‌ಐಆರ್ ಮಾಂಸ ಸಾಗಣೆ ವಿರುದ್ಧವಾಗಿತ್ತು, ನಾಯಿ ಮಾಂಸದೊಂದಿಗೆ ಬೆರೆಸಬಹುದೆಂದು ಶಂಕಿಸಲಾಗಿದೆ ಮತ್ತು ಎರಡನೆಯದು ಆಹಾರ ಗುಣಮಟ್ಟ ಇಲಾಖೆ ಅಧಿಕಾರಿಗಳ ಕರ್ತವ್ಯಕ್ಕೆ ಅಡ್ಡಿಪಡಿಸಿದ ಸ್ವಯಂ ಘೋಷಿತ ಗೋರಕ್ಷಕ ಪುನೀತ್ ಕೆರೆಹಳ್ಳಿ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲಾಗಿದೆ. ಸಾರ್ವಜನಿಕ ಸ್ಥಳದಲ್ಲಿ ಕಾನೂನುಬಾಹಿರವಾಗಿ ಗುಂಪುಗೂಡಿದ್ದಕ್ಕಾಗಿ ಪುನೀತ್ ಮತ್ತು ಅವರ ನಾಲ್ವರು ಸಹಚರರ ವಿರುದ್ಧ ದೂರು ದಾಖಲಿಸಲಾಗಿದೆ.

ಆಹಾರ ಸುರಕ್ಷತಾ ಪ್ರಾಧಿಕಾರದ ಸಂಶೋಧನೆಗಳು, ಆಹಾರ ಸುರಕ್ಷತಾ ಆಯುಕ್ತ ಕೆ ಶ್ರೀನಿವಾಸ್ ಪ್ರತಿಕ್ರಿಯಿಸಿ, “ಆರಂಭದಲ್ಲಿ ಮಾಂಸವು ನಾಯಿಯ ಮಾಂಸವಲ್ಲ, ಆದರೆ ರಾಜಸ್ಥಾನ ಮತ್ತು ಕಚ್-ಭುಜ್ ಪ್ರದೇಶಗಳಲ್ಲಿ ಹೆಚ್ಚಾಗಿ ಕಂಡುಬರುವ ಸಿರೋಹಿ ಎಂಬ ಮೇಕೆಯ ವಿಶೇಷ ತಳಿಯಾಗಿದೆ. ಗುಜರಾತಿನವರು ಅವುಗಳ ಮೇಲೆ ಸ್ವಲ್ಪ ಉದ್ದವಾದ ಬಾಲ ಮತ್ತು ಮಚ್ಚೆಗಳನ್ನು ಹೊಂದಿರುತ್ತವೆ” ಎಂದು ಹೇಳಿದ್ದರು.

### ಪಂ. ಬಸವರಾಜಶಾಸ್ತ್ರಿ ಕೋಡಿಕೊಪ್ಪಮಠ ದತ್ತಿ ಉಪನ್ಯಾಸದಲ್ಲಿ ಚಂದ್ರಶೇಖರ ವಸ್ತ್ರದ ಅಭಿಮತ

# ಶಾಸ್ತ್ರಿಗಳು ನವೋದಯ ಸಾಹಿತ್ಯದ ಶ್ರೇಷ್ಠ ಲೇಖಕ

■ವಿಜಯಸಾಕ್ಷಿ ಸುದ್ದಿ, ಗದಗ

ಪಂ. ಬಸವರಾಜ ಶಾಸ್ತ್ರೀಗಳು ನವೋದಯ ಸಾಹಿತ್ಯ ಕಾಲದಲ್ಲಿದ್ದ ಶ್ರೇಷ್ಠ ಲೇಖಕ ಮತ್ತು ಅನುವಾದಕರಾಗಿದ್ದರು. ಅನೇಕ ಸಂಸ್ಕೃತ ಮಹಾಕಾವ್ಯಗಳನ್ನು ಕನ್ನಡಕ್ಕೆ ಅನುವಾದಿಸಿದ್ದರು. ಸ್ವಾತಂತ್ರ್ಯ ಪೂರ್ವದಲ್ಲಿ ಇವರು ರಚಿಸಿದ ಪುಸ್ತಕಗಳು ವಿದ್ಯಾರ್ಥಿಗಳಿಗೆ ಪಠ್ಯ-ಪುಸ್ತಕಗಳಾಗಿದ್ದವು ಎಂದು ಸಾಹಿತಿ ಚಂದ್ರಶೇಖರ ವಸ್ತ್ರದ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಪಂ. ಬಸವರಾಜ ಶಾಸ್ತ್ರಿ ಕೋಡಿಕೊಪ್ಪಮಠ ಸ್ಮರಣಾರ್ಥ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಡಾ. ರಮೇಶ ಕಲ್ಲನಗೌಡರ ಅವರು, ಬಸವರಾಜ ಶಾಸ್ತ್ರಿಗಳು ರಚಿಸಿದ ಕೋಡಿಕೊಪ್ಪದ ಹಠಯೋಗಿ ಹುಚ್ಚಿರಪ್ಪಜ್ಜನವರ ಜೀವನ ಚರಿತ್ರೆ ಪುಸ್ತಕದ ಕುರಿತು ಮಾತನಾಡಿ, ವೀರಪ್ಪಜ್ಜನವರು ಯೋಗಿಯಾಗಿದ್ದು, ಬಾಲಕನಂತೆ, ಪಿಶಾಚಿಯಂತೆ, ಹುಚ್ಚನಂತೆ ಲೋಕದಲ್ಲಿ ಸಂಚರಿಸಿ ಲೋಕಕಲ್ಯಾಣಕ್ಕಾಗಿ ತಮ್ಮ ಜೀವನವನ್ನೇ ಸಮರ್ಪಿಸಿಕೊಂಡಿದ್ದಾರೆ. ಸಿದ್ಧಪುರುಷರು ಅಹಿಂಸೆ, ಸತ್ಯ, ಅಸ್ತೇಯ, ಬ್ರಹ್ಮಚರ್ಯ ಮೊದಲಾದ ಸದ್ಗುಣಗಳಿಂದ ಕೂಡಿದವರಾಗಿರುತ್ತಾರೆ. ಭಾವೈಕ್ಯತೆಯ ಪ್ರತಿರೂಪದಂತಿರುವ ಹುಚ್ಚಿರಪ್ಪನವರು ಅನೇಕ ಜನರ ಸಂಕಟಗಳಿಗೆ ಸಮಾಧಾನವನ್ನು ಕರುಣಿಸಿದ್ದಾರೆಂದರು.



ಹಠಯೋಗಿ ಹುಚ್ಚಿರಪ್ಪಜ್ಜನವರ ಕುರಿತಾದ ಪುಸ್ತಕವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ರವೀಂದ್ರನಾಥ ದೊಡ್ಡಮೇಟಿ, ನರೇಗಲ್ ಪರಿಸರದಲ್ಲಿ ವಾಸವಾಗಿದ್ದ ಹುಚ್ಚಿರಪ್ಪನವರು ಜಾತಿ-ಮತ-ಪಂಥಗಳನ್ನು ಮೀರಿ ಅಲೌಕಿಕ ಸಾಧನೆಯನ್ನು ಮಾಡಿ, ಜನರ ದುಃಖ-ದುಮ್ಮಾನಗಳಿಗೆ ಪರಿಹಾರ ನೀಡಿದ್ದಾರೆ. ಇಂದಿಗೂ ಅಸಂಖ್ಯಾತ ಭಕ್ತರ ಹೃದಯದಲ್ಲಿ ನೆಲೆನಿಂತಿದ್ದಾರೆಂದು ತಿಳಿಸಿದರು.

ಜಗದೀಶ ಕೋಡಿಕೊಪ್ಪಮಠ ವೇದಿಕೆಯಲ್ಲಿದ್ದರು. ಡಾ. ರಶ್ಮಿ ಅಂಗಡಿ ಸ್ವಾಗತಿಸಿದರು. ಕಿಶೋರಬಾಬು ನಾಗರಕಟ್ಟಿ ನಿರೂಪಿಸಿದರು. ಆಯ್.ಎಸ್. ಹಿರೇಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ಅನ್ನದಾನಿ ಹಿರೇಮಠ, ಚಿನ್ನಮ್ಮ ವಸ್ತ್ರದ, ರತ್ನಕ್ಕ ಪಾಟೀಲ, ಡಾ. ಆರ್. ಎನ್. ಗೋಡಬೋಲೆ, ಡಾ. ರಾಜಶೇಖರ ದಾನರಡ್ಡಿ, ಉಮಾದೇವಿ ಪಾಟೀಲ, ಶೈಲಾ ಗಿಡ್ನಂದಿ, ಸಿ.ಎಂ. ಮಾರನಬಸರಿ, ಬಸವರಾಜ ಗಣಪ್ಪನವರ, ಜಯದೇವ ಮೆಣಸಗಿ, ಬಸಯ್ಯ ಬನಹಟ್ಟಿಮಠ, ಭಾಗ್ಯಶ್ರೀ ಕೋಡಿಕೊಪ್ಪಮಠ, ಬಸವರಾಜ ವಾರಿ, ಆರ್.ಡಿ. ಕಪ್ಪಲಿ, ಶಾಂತಲಾ ಹಂಚಿನಾಳ, ರಾಜಶೇಖರ ಕರಡಿ, ರತ್ನಾ ಪುರಂತರ, ಸುಧಾ ಬಳ್ಳಿ, ವಿ.ಎಸ್. ದಲಾಲಿ, ದಿಲೀಪಕುಮಾರ ಮುಗಳಿ, ಜೀತೇಂದ್ರ ಮುಗಳಿ, ಪ್ರ. ತೋ. ನಾರಾಯಣಪೂರ, ಅಮರೇಶ ರಾಂಪೂರ, ಎ.ಸಿ. ಹಿರೇಮಠ, ಡಿ.ಎಸ್. ಬಾಪುರಿ, ಎಸ್.ಎಫ್. ತಳವಾರ, ಶಿವಾನಂದ ಭಜಂತ್ರಿ, ಅಶೋಕ ಸತ್ಯರಡ್ಡಿ, ರಮೇಶ ಹತ್ತಿಕಾಳ, ಶಶಿಕಾಂತ ಕೊರ್ಲಹಳ್ಳಿ, ಎಸ್.ಎಫ್. ಬೆನಕಣ್ಣವರ, ವಿ.ಎಸ್. ನಾರಾಯಣಪೂರ, ಬಿ.ಬಿ. ಹೊಳಗುಂದಿ ಮೊದಲಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಭಾರತದ ಪರಿಸರದಲ್ಲಿ ಅಧ್ಯಾತ್ಮಿಕ ಚಿಂತನೆಗಳು ಅನಾದಿ ಕಾಲದಿಂದಲೂ ಬೇರುಬಿಟ್ಟಿವೆ. ವಿವಿಧ ಮಾರ್ಗದಲ್ಲಿ ನಿಜಾನಂದವನ್ನು ಸಾಧಿಸಿದ ಸಾಧಕರನ್ನು ಕಾಣಬಹುದಾಗಿದೆ. ಹುಚ್ಚಿರಪ್ಪನವರನ್ನು ಅತ್ಯಂತ ಸಮೀಪದಿಂದ ನೋಡಿದ ಬಸವರಾಜ ಶಾಸ್ತ್ರೀಗಳು ಇವರ ಕುರಿತು ಮಹತ್ವದ ಕೃತಿಯನ್ನು ರಚಿಸಿದ್ದಾರೆ. ಈ ಕೃತಿಯನ್ನು ಮತ್ತೆ ಚಂದ್ರಶೇಖರ ವಸ್ತ್ರದ ಅವರು ಕ್ಷಮಾ ಪ್ರಕಾಶನದ ಮೂಲಕ ಪ್ರಕಟಿಸಿ ಓದುಗರಿಗೆ ನೀಡಿದ್ದಾರೆಂದು ತಿಳಿಸಿದರು

# ವಿದ್ಯಾರ್ಥಿಗಳು ಓದುವ ಕೌಶಲ್ಯ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಓದುವಿಕೆಯಿಂದ ಜ್ಞಾನದ ಹರಿವು ವೃದ್ಧಿಸುತ್ತದೆ. ಶಾಲೆಗಳಲ್ಲಿ ಮಕ್ಕಳಿಗೆ ಉತ್ತಮ ಓದುವ ಕೌಶಲ್ಯವನ್ನು ವೃದ್ಧಿಪಡಿಸಲು ಪ್ರೋತ್ಸಾಹದಾಯಕವಾಗಿ ಹಲವಾರು ಕ್ರಮಗಳನ್ನು ಅನುಸರಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದು ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನ ಲಿಟರೇಚರ್ ಕಮಿಟಿ ಚೇರಮನ್ ಸುಮಾ ಪಾಟೀಲ ಹೇಳಿದರು.

ಅವರು ಮಂಗಳವಾರ ಗದಗ ಶಹರದ ಎಸ್.ಎಂ. ಕೃಷ್ಣಾ ನಗರದ ಸರಕಾರಿ ಶಾಲೆ ನಂ.12ರಲ್ಲಿ ಕ್ಲಬ್‌ನಿಂದ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಓದುವ ಕೌಶಲ್ಯ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ನಾಗರತ್ನ ಮಾರನಬಸರಿ ಮಾತನಾಡಿ, ಚಿಕ್ಕ ವಯಸ್ಸಿನಲ್ಲಿಯೇ ಉತ್ತಮ ಸಂದೇಶಯುಕ್ತ ಮೌಲ್ಯಾಧಾರಿತ ಪುಸ್ತಕಗಳನ್ನು ವಿದ್ಯಾರ್ಥಿಗಳು ಓದುವುದರಿಂದ ಅವರಲ್ಲಿ ಸೃಜನಶೀಲತೆ ಬೆಳೆದುಬರುತ್ತದೆ ಎಂದರು.

ಕಾರ್ಯದರ್ಶಿ ವೀಣಾ ತಿರ್ಲಾಪೂರ ಮಾತನಾಡಿ, ಪಾಲಕರು ಮಕ್ಕಳಿಗೆ ಓದುವಿಕೆಯಂತಹ ಸೃಜನಶೀಲ ಹವ್ಯಾಸಗಳನ್ನು ರೂಢಿಸಬೇಕು. ಟಿ.ವ್ಹಿ, ಮೊಬೈಲ್ ಗೀಳಿನಿಂದ ಮಕ್ಕಳು ದೂರ ಇರುವದು ಒಳ್ಳೆಯದು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯರಾದ ಎಚ್.ಆರ್. ಕೋಣಿಮನಿ ಮಾತನಾಡಿದರು. ಕಾರ್ಯಕ್ರಮದ ಪ್ರಾಯೋಜತ್ವವನ್ನು ಮೀನಾಕ್ಷಿ ಕೋರವನವರ ವಹಿಸಿದ್ದರು. ಐಎಸ್‌ಓ ಪುಷ್ಪಾ ಭಂಡಾರಿ ಉಪಸ್ಥಿತರಿದ್ದರು. ವ್ಹಿ.ಜಿ. ಪಾಟೀಲ ಪ್ರಾರ್ಥಿಸಿದರು, ಎಸ್.ಬಿ. ಕನಕಿ ಸ್ವಾಗತಿಸಿದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಯು. ವಕ್ಕಳದ ನಿರೂಪಿಸಿದರು. ಚಾಮರಾಜ ಹುಡೇದ ವಂದಿಸಿದರು.

ಎಂ.ಎಚ್. ಬಳಬಟ್ಟಿ, ಎಸ್.ಟಿ. ಲಮಾಣಿ, ಎಸ್.ಬಿ. ದೊಡ್ಡಮನಿ, ಎ.ಎಂ. ಕೆಂಚರಡ್ಡಿಯವರ, ಜಗದೀಶ ಶೀಲವಂತರ, ಎಂ.ಕೆ. ಹುಯಿಲಗೋಳ, ಆರ್.ಸಿ. ಬಾಗೇವಾಡಿ ಉಪಸ್ಥಿತರಿದ್ದರು.

# ಬೀದಿ ನಾಯಿಗಳ, ದನಗಳ ಹಾವಳಿಗೆ ಕಡಿವಾಣ ಹಾಕಿ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ-ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಪ್ರಮುಖ ಬೀದಿಗ, ರಸ್ತೆಗಳು ಹಾಗೂ ಪ್ರಮುಖ ವೃತ್ತಗಳಲ್ಲಿ ಬೀದಿ ನಾಯಿಗಳ ಮತ್ತು ಬಿಡಾಡಿ ದನಗಳ ಹಾವಳಿ ಮಿತಿಮೀರಿದ್ದು, ಎಲ್ಲೆಂದರಲ್ಲಿ ಗುಂಪಾಗಿ ಕಂಡುಬರುತ್ತಿವೆ. ಇದರಿಂದ ವಾಹನ ಸವಾರರು, ವಿದ್ಯಾರ್ಥಿಗಳು ಭಯದಿಂದಲೇ ಸಂಚರಿಸುವಂತಾಗಿದೆ ಎಂದು ಸಾಮಾಜಿಕ ಕಾರ್ಯಕರ್ತ ರಾಘವೇಂದ್ರ ಪಾಲನಕರ ಆತಂಕ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಿಡಾಡಿ ದನಗಳು ರಾತ್ರಿ-ಹಗಲೆನ್ನದೇ ರಸ್ತೆಯ ಮೇಲೆ ಮಲಗಿರುವುದರಿಂದ ಅಪಘಾತಗಳು ಸಂಭವಿಸಿ ಹಲವಾರು ದ್ವಿಚಕ್ರ ವಾಹನ ಸವಾರರು ಗಾಯಗೊಂಡಿದ್ದಾರೆ. ಈ ಕುರಿತು ಎಚ್ಚರ ವಹಿಸಬೇಕಾದ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಮತ್ತು ನಗರಸಭೆ ನಿದ್ರೆಗೆ ಜಾರಿದ್ದು, ಬೀದಿ ನಾಯಿಗಳ, ಬಿಡಾಡಿ ದನಗಳನ್ನು ನಿಯಂತ್ರಿಸುವವರು ಯಾರು ಎಂಬ ಪ್ರಶ್ನೆ ಮೂಡುತ್ತಿದೆ.

ಈಗಲಾದರೂ ಎಚ್ಚೆತ್ತು ಬೀದಿ ನಾಯಿಗಳ ಹಾಗೂ ಬಿಡಾಡಿ ದನಗಳ ನಿಯಂತ್ರಣಕ್ಕಾಗಿ ಅಗತ್ಯವಿರುವ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಬೇಕೆಂದು ಅವರು ಆಗ್ರಹಿಸಿದ್ದಾರೆ.

# ಕೆಲಸ ಮಾಡುವ ಕೈಗಳು ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗ ಪೂಜೆ ಮಾಡುವ ಕೈಗಳಿಗಿಂತ ಕೆಲಸ ಮಾಡುವ ಕೈಗಳೇ ಶ್ರೇಷ್ಠ. ಅದಕ್ಕಾಗಿಯೇ ಬಸವಣ್ಣನವರು 'ಕಾಯಕವೇ ಕೈಲಾಸ' ಎಂದು ಸಾರಿರುವುದಾಗಿ ಮ.ನಿ.ಪ್ರ ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ನುಡಿದರು.

ಎ.ಐ.ಟಿ.ಯು.ಸಿ. ಸಂಯೋಜಿತ ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಗದಗ ಜಿಲ್ಲಾ 2ನೇ ಸಮ್ಮೇಳನ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಈಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಕಾರ್ಮಿಕರೆಲ್ಲ ಒಂದಾಗಿ




ಸಂಘಟನೆಗಳನ್ನು ಬಲಗೊಡಿಸಲು ಕರೆ ನೀಡಿದರು.

ಕಾಂ.ಸಿದ್ದನಗೌಡ ಪಾಟೀಲ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಐಕ್ಯತೆಯಿಂದ ಹೋರಾಡಲು ಎ.ಐ.ಟಿ.ಯು.ಸಿ ನಿಮಗೆ ಅವಕಾಶ ಮಾಡಿಕೊಟ್ಟಿದೆ. ಕಾರ್ಮಿಕರೆಲ್ಲರೂ ರಾಜಕೀಯ ಪ್ರಜ್ಞೆಯನ್ನು ಬೆಳೆಸಿಕೊಳ್ಳಿ ಎಂದು ಕರೆ ನೀಡಿದರು.

ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಕಾಂ. ಅಮಜಾದ, ಕಾಂ. ಗಿರೀಶ ತುಮಕೂರು, ಕಾಂ. ಎ.ಎಸ್. ಜನಾರ್ಧನ, ಕಾಂ. ಹೊನ್ನಪ್ಪ ಮರಿಯಮ್ಮನವರ, ಕಾಂ. ರಾಘವೇಂದ್ರ ನಾಯರಿ, ಕಾಂ. ಎ.ಎಸ್. ಪೀರಜಾದೆ, ಕಾಂ. ಎಲ್.ತಿಮ್ಮಣ್ಣ, ಬತ್ತೂಲ್ ಕಿಲ್ಲೇದಾರ, ಕಾಂ. ಎಂ.ಐ. ನವಲೂರು, ಅಡಿವೆಪ್ಪ ಚಲವಾದಿ, ಈಶ್ವರ ಲಕ್ಷ್ಮೇಶ್ವರ, ಈರಣ ಶಿವಶಿಂಪಿಗೇರ, ನಜೀರ ಶಿರಹಟ್ಟಿ, ವಜೀರ ಬನ್ನೂರ ಮುಂತಾದವರು ಉಪಸ್ಥಿತರಿದ್ದರು.

ಬಸವರಾಜ ದೇ.ಅರಮನಿ ಸ್ವಾಗತಿಸಿದರು. ಗವಿಸಿದ್ದಯ್ಯ ಹಳ್ಳಿಕೇರಿಮಠ ಕಾರ್ಯಕ್ರಮ ನಿರೂಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಭಾರತೀಯ ಜನ ಕಲಾ (ಇಪ್ಟಾ) ಕಲಾವಿದ ಷಣ್ಮುಖಸ್ವಾಮಿ ಕ್ರಾಂತಿಗೀತೆ ಹಾಡಿದರು.

# ಹೆಸರು ಖರೀದಿ ಕೇಂದ್ರ ಆರಂಭಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾದ್ಯಂತ ಈ ವರ್ಷ ಮುಂಗಾರು ಮಳೆ ವಾಡಿಕೆಗಿಂತ ಅಧಿಕ ಪ್ರಮಾಣದಲ್ಲಿ ಸುರಿದಿದ್ದು, ರೈತರು ಅಧಿಕ ಪ್ರಮಾಣದಲ್ಲಿ ಹೆಸರನ್ನು ಬಿತ್ತನೆ ಮಾಡಿದ್ದಾರೆ. ಚೆನ್ನಾಗಿಯೇ ಬೆಳೆದಿದ್ದ ಬೆಳೆಯೀಗ ಜಿಟಿ ಜಿಟಿ ಮಳೆಗೆ ಹಳದಿ ನಂಜಾಣು ರೋಗಬಾಧೆ ಆವರಿಸಿ ಸಂಪೂರ್ಣ ನಾಶವಾಗಿದೆ. ಅಳಿದುಳಿದ ಬೆಳೆಯನ್ನು ಮಾರುಕಟ್ಟೆಗೆ ತೆಗೆದುಕೊಂಡು ಹೋದರೆ ಸರಿಯಾದ ಬೆಲೆ ಸಿಗುತ್ತಿಲ್ಲ. ಹೀಗಾಗಿ, ಸರ್ಕಾರವೇ ಕನಿಷ್ಠ 10,500 ರೂಪಾಯಿಗೆ ಹೆಸರಿಗೆ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿಸಲು ಮುಂದಾಗಬೇಕು ಎಂದು ಗದಗ ಜಿಲ್ಲಾ ರೈತ ಸಂಘದ ಅಧ್ಯಕ್ಷರಾದ ಯಲ್ಲಪ್ಪ ಎಚ್ ಬಾಬರಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ರೈತರು ಕಾಳನ್ನು ದಲ್ಲಾಳಿಗಳಿಗೆ ಕೇಳಿದ ಬೆಲೆಗೆ ಮಾರಾಟ ಮಾಡಿ ಬರಬೇಕಾಗಿದೆ. ಅದಕ್ಕೆ ಸರ್ಕಾರ ಕೂಡಲೇ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿ ಕೇಂದ್ರ ಪ್ರಾರಂಭಿಸಬೇಕೆಂದು ಒತ್ತಾಯಿಸಿದ್ದಾರೆ. ಇವರ ಹೇಳಿಕೆಗೆ ಅಂದಪ್ಪ ಕೂಳೂರು, ಹುಚ್ಚೀರಪ್ಪ ಜೋಗಿನ, ಗಿರೀಶ್ ಗುಡ್ಲಾನೂರ, ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ಅನ್ನಪ್ಪಗೌಡ ದೇಸಾಯಿ, ರಾಮಣ್ಣ ಖಂಡ್ರಿ ಮುಂತಾದ ರೈತ ಮುಖಂಡರು ಬೆಂಬಲ ವ್ಯಕ್ತಪಡಿಸಿದ್ದಾರೆ.

# ಸಮಯಪಾಲನೆಯಿಂದ ಪ್ರಾಮಾಣಿಕತೆ ಬರಲು ಸಾಧ್ಯ




■ವಿಜಯಸಾಕ್ಷಿ ಸುದ್ದಿ, ರೋಣ

ಸರಕಾರಿ ನೌಕರರಲ್ಲಿ ಸಮಯಪಾಲನೆಯಿದ್ದಾಗ ಮಾತ್ರ ಪ್ರಾಮಾಣಿಕತೆ ಬರಲು ಸಾಧ್ಯ ಎಂದು ಜಿ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಎಸ್. ಹಿತ್ತಲ್‌ಗುತ್ತಿ ಹೇಳಿದರು.

ಅವರು ಬುಧವಾರ ತಾ.ಪಂ ಸಭಾಭವನದಲ್ಲಿ ಜರುಗಿದ ತಮ್ಮ ಸೇವಾ ನಿವೃತ್ತಿಯ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಸಮಯಕ್ಕೆ ಮಹತ್ವ ಕೊಟ್ಟಾಗ ಮಾತ್ರ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯ ಎನ್ನುವ ಸತ್ಯವನ್ನು ಅರಿಯಬೇಕು. ಅಂದಾಗ ಮಾತ್ರ ಪ್ರಾಮಾಣಿಕತೆ ತಾನಾಗಿಯೇ ಬರುತ್ತದೆ. ಸರಕಾರಿ ನೌಕರನಾಗಿ 30 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿದ್ದೇನೆ. ಸರಕಾರ ಜಾರಿಗೆ ತಂದ ಯೋಜನೆಗಳನ್ನು ಪ್ರಾಮಾಣಿಕವಾಗಿ ಜನರಿಗೆ ಮುಟ್ಟಿಸಿದರೆ ನಮಗೆ ನೆಮ್ಮದಿ ಸಿಗುತ್ತದೆ ಎಂಬ ಭಾವನೆ ಪ್ರತಿ ನೌಕರರಲ್ಲಿ ಬಂದಾಗ ಸಮಸ್ಯೆಗಳು ದೂರಾಗುತ್ತವೆ ಎಂದರು.

ಎಸ್.ಎಸ್. ಹಿತ್ತಲ್‌ಗುತ್ತಿ ಅವರನ್ನು ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸನ್ಮಾನಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆರ್‌ಡಬ್ಲುಎಸ್ ಇಇ ಚಂದ್ರಕಾಂತ ವಹಿಸಿದ್ದರು.

ಎಂ.ಡಿ. ತೋಗುಣಸಿ, ಎಸ್.ನಿಲಗುಂದ, ಎಂ.ಎಸ್. ಪಾಟೀಲ, ಎಂ.ಮಹದೇವಪ್ಪ, ಶಂಕರಗೌಡ ಪಾಟೀಲ, ಪ್ರವೀಣ ಚೋಳಿನ, ಎಂ.ಕೇಸರಿ, ಎಸ್.ಎಂ. ಪಲ್ಲೇದ ಸೇರಿದಂತೆ ಗುತ್ತಿಗೆದಾರರು ಉಪಸ್ಥಿತರಿದ್ದರು. ಪ್ರಭು ಸೋಮನಕಟ್ಟಿ ನಿರೂಪಿಸಿ ವಂದಿಸಿದರು.

# ಸರ್ಕಾರಿ ಶಾಲೆಗೆ ದೇಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಡವಿಸೋಮಾಪೂರ ಸಣ್ಣ ತಾಂಡೆ ಗ್ರಾಮದ ಶಿಕ್ಷಣ ಪ್ರೇಮಿಗಳಾದ ಕೃಷ್ಣ ಸಕ್ರಪ್ಪ ಲಮಾಣಿ ಫಿನ್‌ಲ್ಯಾಂಡ್ ದೇಶಕ್ಕೆ ಹೋಗಿ ಬಂದ ನೆನಪಿಗಾಗಿ 5 ಸಾವಿರ ರೂಗಳನ್ನು ಇಲ್ಲಿನ ಶಾಲೆಗೆ ದೇಣಿಗೆಯಾಗಿ ನೀಡಿದರು.

ಶಾಲಾ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್, ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಎಸ್‌ಡಿಎಂಸಿ ಅಧ್ಯಕ್ಷ ಮಾರುತಿ




ಪವಾರ, ಗ್ರಾಮ ಪಂಚಾಯಿತಿ ಸದಸ್ಯ ವೆಂಕಟೇಶ್ ಲಮಾಣಿ, ಕೃಷ್ಣ ಲಮಾಣಿ, ಥಾವರೆಪ್ಪ ಪವಾರ, ಕುಮಾರ್ ನಾಯಕ, ಉಮೇಶ್ ಲಮಾಣಿ, ಮಾರುತಿ ಲಮಾಣಿ, ಹಾಲಪ್ಪ ಲಮಾಣಿ, ಗ್ರಾಮಸ್ಥರು, ಶಾಲಾ ಮಕ್ಕಳು ದೇಣಿಗೆ ನೀಡಿದ ದಾನಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

# ಯುಪಿಎಸ್‌ಸಿ ಅಧ್ಯಕ್ಷೆಯಾಗಿ ಮಾಜಿ ಕೇಂದ್ರ ಆರೋಗ್ಯ ಕಾರ್ಯದರ್ಶಿ ಪ್ರೀತಿ ಸೂದನ್ ನೇಮಕ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರದ ಮಾಜಿ ಆರೋಗ್ಯ ಕಾರ್ಯದರ್ಶಿ ಪ್ರೀತಿ ಸೂದನ್ ಅವರು ಕೇಂದ್ರ ಲೋಕ ಸೇವಾ ಆಯೋಗ (ಯುಪಿಎಸ್‌ಸಿ) ಅಧ್ಯಕ್ಷೆಯಾಗಿ ನೇಮಕಗೊಂಡಿದ್ದು ಆಗಸ್ಟ್ 1ರಿಂದ ಯುಪಿಎಸ್‌ಸಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

ಈ ತಿಂಗಳ ಆರಂಭದಲ್ಲಿ ಮನೋಜ್ ಸೋನಿ ವೈಯಕ್ತಿಕ ಕಾರಣ ನೀಡಿ ಯುಪಿಎಸ್‌ಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇದೀಗ ಈ ಸ್ಥಾನವನ್ನು 1983ರ ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿರುವ ಪ್ರೀತಿ ಸೂದನ್ ತುಂಬಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದನೆಯ ಬಳಿಕ ಪ್ರೀತಿ ಸೂದನ್ ಅವರನ್ನು ಯುಪಿಎಸ್‌ಸಿ ಅಧ್ಯಕ್ಷೆಯಾಗಿ ನೇಮಿಸಲಾಗುತ್ತಿದೆ ಎಂದು ಹೆಚ್ಚುವರಿ ಕಾರ್ಯದರ್ಶಿ ಮನೋಜ್ ಕುಮಾರ್ ದ್ವಿವೇದಿ ಅವರು ಯುಪಿಎಸ್‌ಸಿ ಕಾರ್ಯದರ್ಶಿ ಶಶಿರಂಜನ್ ಕುಮಾರ್ ಅವರಿಗೆ ಬರೆದ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

## ನಿಧನ ವಾರ್ತೆ

### ರಾಮಣ್ಣಾ ಸಿದ್ದನಗೌಡರ



ಮುಳಗುಂದ: ಪಟ್ಟಣದ ಚಿಂದಿಪೇಟಿ ಓಣಿಯ ನಿವಾಸಿ ರಾಮಣ್ಣಾ ಸಿದ್ದನಗೌಡರ (ಸೊರಟೂರ) (66) ಬುಧವಾರ ನಿಧನರಾದರು. ಮೃತರು ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

### ಹಾಲಪ್ಪ ಮಳ್ಳಿ



ಮುಳಗುಂದ: ಪಟ್ಟಣದ ಬಂಡಿ ಓಣಿಯ ನಿವಾಸಿ ಹಾಲಪ್ಪ ಮಳ್ಳಿ (80) ಬುಧವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

# ವಿದ್ಯಾರ್ಥಿ ಹಿತಾಸಕ್ತಿ, ಉತ್ತಮ ಆಡಳಿತ ಮೇಟಿಯವರ ಕೊಡುಗೆ: ಕೆ.ವಿ.ಪ್ರಸಾದ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕಾಲೇಜಿನ ಬೋಧಕರ, ಬೋಧಕೇತರರ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಗೆ ಅನುಗುಣವಾಗಿ ಉತ್ತಮ ಆಡಳಿತ ನಿರ್ವಹಿಸಿದ್ದು ಪ್ರೊ.ತಿಮ್ಮಾರಡ್ಡಿ ಮೇಟಿಯವರ ಕಾರ್ಯದಕ್ಷತೆಗೆ ಹಿಡಿದ ಕನ್ನಡಿ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಸಚಿವ ಕೆ.ವಿ.ಪ್ರಸಾದ್ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಒಳ ಆವರಣದಲ್ಲಿ ಬುಧವಾರ ಪ್ರೊ.ತಿಮ್ಮಾರಡ್ಡಿ ಮೇಟಿಯವರ ಸೇವಾನಿವೃತ್ತಿ ಪ್ರಯುಕ್ತ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭ ಹಾಗೂ ಮೇಟಿಯವರ ಕುರಿತ ಅಪ್ಪಟ ಅಪರಂಜಿ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕೊಪ್ಪಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪದವಿ ಮಹಾವಿದ್ಯಾಲಯಗಳಲ್ಲೇ ಅತ್ಯಧಿಕ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿದ ಕಾಲೇಜೆಂದರೆ ಕೊಪ್ಪಳದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು. ಆಡಳಿತದಲ್ಲಿ ಅತ್ಯಂತ ನಿಪುಣತೆ ಮತ್ತು ಚಾಣಾಕ್ಷತೆಯನ್ನು ಪಡೆದಿದ್ದರು. ಕೊಪ್ಪಳ ವಿಶ್ವವಿದ್ಯಾಲಯದೊಂದಿಗೆ ಉತ್ತಮ ಸಂಬಂಧವನ್ನು ಹೊಂದಿದ್ದರು ಎಂದರು.

ವಿಶ್ವವಿದ್ಯಾಲಯ ಮತ್ತು ಆಡಳಿತ ವಿಷಯಕ್ಕೆ ಸಂಬಂಧಪಟ್ಟಂತೆ ಇವರು ನಮಗೆ ಉತ್ತಮ ಸಲಹೆ ಸೂಚನೆ ಮಾರ್ಗದರ್ಶನ ನೀಡುತ್ತಿದ್ದರು. ಇಂಥಹ ಅಪಾರ ಅನುಭವಿ ತಿಮ್ಮಾರಡ್ಡಿ ಮೇಟಿ ಅವರು ವಯೋಸಹಜ ನಿವೃತ್ತಿಯನ್ನು



ಹೊಂದುತ್ತಿರುವ ಈ ಸಂದರ್ಭದಲ್ಲಿ ಅವರ ಬದುಕಿನ ಸಾಧನೆಯ ಕುರಿತು ಅಭಿನಂದನ ಗ್ರಂಥವನ್ನು ಹೊರ ತರುತ್ತಿರುವ ಅತ್ಯಂತ ಸಂತಸವಾಗಿದೆ. ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಬಿ ಕೆ ರವಿ ಅವರು ಅನ್ಯ ಕಾರ್ಯ ನಿಮಿತ್ತ ಹೋಗಿರುವುದರಿಂದ ಅವರ ಪರವಾಗಿ ಕುಲ ಸಚಿವರಾಗಿ ಕಾರ್ಯಕ್ರಮದ ಉದ್ಘಾಟನೆ ಮಾಡಿದ್ದು ನನಗೆ ಅತೀವ ಸಂತಸ ತಂದಿದೆ ಎಂದು ತಿಳಿಸಿದರು.

ಅಪ್ಪಟ ಅಪರಂಜಿ ಅಭಿನಂದನಾ ಗ್ರಂಥ ಬಿಡುಗಡೆಗೊಳಿಸಿ ಮಾತನಾಡಿದ ಹಗರಿಬೊಮನಹಳ್ಳಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಕೆ.ವೆಂಕಟೇಶ, ದೇಶಿಯ ಸೊಗಡಿನಿಂದ ಬಂದ ಪ್ರತಿಭೆ ತಿಮ್ಮಾರಡ್ಡಿ ಮೇಟಿ. ಅಪ್ಪಟ ಗ್ರಾಮೀಣ ಕುಟುಂಬದಲ್ಲಿ ಬೆಳೆದು ಬಂದ ಇವರು ಬದುಕಿನಲ್ಲಿ ಬಡತನ, ಅನೇಕ ಕಷ್ಟಕಾರ್ಪಣ್ಯಗಳು, ನೋವು-ನಲಿವುಗಳೆಲ್ಲವನ್ನು ಸಮಾನವಾಗಿ ಹಂಚಿಕೊಂಡಂತವರು ಎಂದು ಶ್ಲಾಘಿಸಿದರು.

ಆ ಕಾರಣಕ್ಕಾಗಿಯೇ ಚೆನ್ನಾಗಿ ಓದಿಕೊಂಡು ವಾಣಿಜ್ಯ ವಿಭಾಗದ ಪ್ರಾಧ್ಯಾಪಕರಾಗಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕೆಲಸಕ್ಕೆ ಸೇರಿ ಕೊಪ್ಪಳದಂತ ಈ ಬೃಹತ್ ವಿದ್ಯಾರ್ಥಿಗಳಿರುವ ಕಾಲೇಜಿನ ಪ್ರಾಂಶುಪಾಲರಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಎಲ್ಲರೊಂದಿಗೆ ಪ್ರೀತಿಯಿಂದ ಬೆರೆತುಕೊಳ್ಳುವ ಇವರ ಮನಸ್ಸಿನಲ್ಲಿ ಯಾವುದೇ ಬಗೆಯ ನಂಜಿನ ಗುಣ ಇರಲಿಲ್ಲ. ಸದಾ ಶಿಸ್ತು ಬದ್ಧ ಜೀವನ ಇವರದಾಗಿತ್ತು. ಅನೇಕ ಯುವ ಪ್ರಾಧ್ಯಾಪಕರಿಗೆ ಇವರು ಪ್ರೇರಣೆಯಾಗಿದ್ದಾರೆ. ಇವರ ಸಾಧನೆಯ ನೋಟವನ್ನು ಪರಿಚಯಿಸುವ ದೃಷ್ಟಿಯಿಂದ ಅವರ ಕುರಿತಾಗಿ ಅಭಿನಂದನ ಗ್ರಂಥವನ್ನು ಹೊರ ತರುತ್ತಿರುವುದು ಅತ್ಯಂತ ಶ್ಲಾಘನೀಯವಾದುದು ಮತ್ತು ಅರ್ಹ ವ್ಯಕ್ತಿಗೆ ಸಂದ ಗೌರವವಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಡಾ. ಗವಿಸಿದ್ದಪ್ಪ ಮುತ್ತಾಳ, ಉಮೇಶ್ ಅಂಗಡಿ, ಮಹಾಂತೇಶ್ ಪಾಟೀಲ್ ಮೈನಳ್ಳಿ, ಕೇಶವರಡ್ಡಿ ಮಾದಿನೂರ್, ಬಸವರಡ್ಡಿ ಹಳ್ಳಿಕೇರಿ, ಕೊಪ್ಪಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವ್ಯವಸ್ಥಾಪಕ ಮಹಾಂತೇಶ್, ಸೋಮರಡ್ಡಿ ಅಳವಂಡಿ, . ಶ್ರೀಮತಿ ಸರೋಜಾ ಮೇಟಿ, ಶಂಕರಗೌಡ ಹಿರೇಗೌಡ್ರ, ಡಾಕ್ಟರ್ ಹನುಮಂತ ಕಲ್ಮನಿ, ವಿನೋದ್ ಚಂದ್ ಪೀಟರ್, ಪ್ರಕಾಶಗೌಡ , ಮಂಜುನಾಥ್ ಗೊಂಡವಾಳ, ಮಂಜುನಾಥ್ ಆರೆಂಟನೂರ,

ಮಾರುತೇಶ್, ಪ್ರಕಾಶ್ ಬಳ್ಳಾರಿ, ಶಿವಬಸಪ್ಪ ಮಸ್ಕಿ, ಡಾ.ಕನಕೇಶ ಮೂರ್ತಿ,ಎಂ.ಕೆ.ಇಬ್ರಾಹಿಂ ಮತ್ತಿತರರು ಇದ್ದರು.

ಬಸವರಾಜ ಕರುಗಲ್ ಪ್ರಾಸ್ತಾವಿಕ ಮಾತನಾಡಿದರು. ಪ್ರಕಾಶಗೌಡ ಎಸ್.ಯು. ಆಶಯ ನುಡಿಗಳನ್ನಾಡಿದರು. ಚೈತ್ರಾ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಗೀತಾ ಬನ್ನಿಕೊಪ್ಪ ಸ್ವಾಗತಿಸಿದರು. ಮಂಜುನಾಥ ಆರೆಂಟನೂರ, ಮಹಾಂತೇಶ ನೆಲಾಗಣಿ ನಿರೂಪಿಸಿದರು.

ವರ್ಗಾವಣೆಗೊಂಡ ಸಿಬ್ಬಂದಿಗೆ ಸನ್ಮಾನ: ಸಮಾರಂಭದಲ್ಲಿ ಕೊಪ್ಪಳ ಕಾಲೇಜಿನಿಂದ ವರ್ಗಾವಣೆಗೊಂಡ ಅಧೀಕ್ಷಕ ರವಿಕಿರಣ್ ರಾಠೋಡ, ಡಾಟಾ ಎಂಟ್ರಿ ಆಪರೇಟರ್ ಜೈಪ್ರಕಾಶ್ ಬಿರಾದಾರ್ ಅವರನ್ನು ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಸನ್ಮಾನಿಸಿ ಗೌರವಿಸಿದರು. ಸೇವಾ ನಿವೃತ್ತಿ ಹೊಂದಿದ ಪ್ರೊ.ತಿಮ್ಮಾರಡ್ಡಿ ಮೇಟಿಯವರನ್ನು ಕಾಲೇಜಿನ ಸಿಬ್ಬಂದಿ, ಬಂಧುಮಿತ್ರರು ಸತ್ಕರಿಸಿದರು.

# ಬೀದಿ ಗೋವುಗಳನ್ನು ಗೋಶಾಲೆಗೆ ರವಾನಿಸಿ



■ವಿಜಯಸಾಕ್ಷಿ ಸುದ್ದಿ,ಗದಗ

ಗದಗ ನಗರದ ರಸ್ತೆಗಳಲ್ಲಿ ಬೀದಿ ಗೋವುಗಳು ಓಡಾಡುತ್ತಿದ್ದು, ಜನರಿಗೆ ಹಾಗೂ ವಾಹನ ಸವಾರರಿಗೆ ತೊಂದರೆ ಉಂಟಾಗಿ, ಅಪಾಯಕ್ಕೆ ಕಾರಣವಾಗುತ್ತಿದೆ. ಕೂಡಲೇ ನಗರಸಭೆಯ ಅಧಿಕಾರಿಗಳು ಹಾಗೂ ಆರಕ್ಷಕ ನಿರೀಕ್ಷಕರು ಜನರ ಹಿತದೃಷ್ಟಿಯಿಂದ ಈ ಗೋವುಗಳನ್ನು ಗೋಶಾಲೆಗೆ ರವಾನಿಸಬೇಕೆಂದು ಕ್ರಾಂತಿ ಸೇನಾ ಜಿಲ್ಲಾ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಂತಹ ಜಾನುವಾರುಗಳಿಂದ ಸಾಕಷ್ಟು ಜನ ಅಪಾಯಕ್ಕೆ ಒಳಗಾಗಿದ್ದಾರೆ. ವಾಹನ ಸವಾರರ ಮೇಲೆ ದಾಳಿ ಮಾಡಿರುವ, ಗುದ್ದಿ ಸಾವನ್ನಪ್ಪಿರುವ ಘಟನೆಯೂ ನಡೆದಿದೆ. ಇಂತಹ ಘಟನೆಗಳಿಂದ ಸಾರ್ವಜನಿಕರು ಭಯಭೀತರಾಗಿದ್ದಾರೆ.

ಕಾರಣ, ಸಾರ್ವಜನಿಕರರ ಹಿತದೃಷ್ಟಿಯಿಂದ ಕೂಡಲೇ ಬೀದಿ ಗೋವುಗಳನ್ನು ಹಿಡಿದು ಗೋಶಾಲೆಗೆ ರವಾನಿಸಬೇಕೆಂದು ಅವರು ಒತ್ತಾಯಿಸಿದ್ದಾರೆ.

# ಲೋಕ ಕಲ್ಯಾಣಕ್ಕಾಗಿ ರಾಮನಾಥ ಶ್ರೀಗಳ ಜಲಾನುಷ್ಠಾನ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸಮೀಪದ ಹರ್ಲಾಪೂರ ಗ್ರಾಮದ ಗೆಜ್ಜೆ ಸಿದ್ದೇಶ್ವರ ಮಠದ ಶಿವಯೋಗಿ ಅವಧೂತ ರಾಮನಾಥ ಸ್ವಾಮಿಗಳು ಮಂಗಳವಾರದಿಂದ 5 ದಿನಗಳವರೆಗೆ ಜಲಾನುಷ್ಠಾನ ಕೈಗೊಂಡಿದ್ದಾರೆ.

ಲೋಕ ಕಲ್ಯಾಣರ್ಥವಾಗಿ ಆರಂಭಿಸಿರುವ ಈ ಅನುಷ್ಠಾನವನ್ನು ಮಠದ ಆವರಣದಲ್ಲಿ ಡೋಣಿಯನ್ನು ನಿರ್ಮಿಸಿ ಅದರಲ್ಲಿ ನೀರನ್ನು ತುಂಬಿಸಿ ಪದ್ಮಾಸನದಲ್ಲಿ ಕೈಗೊಂಡಿದ್ದಾರೆ.

ಮುಂಜಾನೆ 11.15ಕ್ಕೆ ಪೂಜಾ ವಿಧಿ-ವಿಧಾನಗಳನ್ನು ನೆರವೇರಿಸಿದ ನಂತರ ಈ ಅನುಷ್ಠಾನವನ್ನು ಆರಂಭಿಸಿದರು.

ಈ ಸಂದರ್ಭದಲ್ಲಿ ಗಣೇಶ ಮುತ್ಯಾ ಅನ್ವರಿ, ಮೌನೇಶ ಮುತ್ಯಾ ಇಳಕಲ್ಲ, ಹರೀಶ ಮುತ್ಯಾ ಹುಬ್ಬಳ್ಳಿ, ಕಾಶಿನಾಕುಂಟಾದ ಸುಸಾಮತ ಮಹಾರಾಜರು, ಪ್ರಭುಸ್ವಾಮಿ ಹಿರೇಮಠ ಹರ್ಲಾಪೂರ ಇವರ ಸಮ್ಮುಖದಲ್ಲಿ ಅನುಷ್ಠಾನದಲ್ಲಿ ತೊಡಗಿಕೊಂಡಿದ್ದಾರೆ. ಆಗಸ್ಟ್ 3ರಂದು ಮುಂಜಾನೆ 11.15ರಂದು ಅನುಷ್ಠಾನ ಮುಕ್ತಾಯಗೊಳ್ಳಲಿದ್ದು, ಗದಗ ಜಿಲ್ಲೆಯ ಹಲವು ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆಂದು ಶ್ರೀ ಮಠದ ಪ್ರಕಟಣೆ ತಿಳಿಸಿದೆ.

# ನೇಹಾ ಕೊಲೆ ಪ್ರಕರಣದಲ್ಲಿ ಸರ್ಕಾರದ ದ್ವಂದ್ವ ನಿರ್ಧಾರ ; ಸಚಿವರ ಹೇಳಿಕೆಗೆ ಕುಟುಂಬಸ್ಥರ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನಗರದ ಪ್ರತಿಷ್ಠಿತ ಕಾಲೇಜಿನಲ್ಲಿ ನಡೆದಿದ್ದ ವಿದ್ಯಾರ್ಥಿನಿ ನೇಹಾ ಹಿರೇಮಠ್ ಕೊಲೆ ಇಡೀ ದೇಶದಲ್ಲಿ ಸುದ್ದಿಯಾಗಿತ್ತು. ಕೊಲೆ ಖಂಡಿಸಿ ಹುಬ್ಬಳ್ಳಿಯಲ್ಲಿ ಮಾತ್ರವಲ್ಲದೇ ದೇಶಾದ್ಯಂತ ಸಾಕಷ್ಟು ಪ್ರತಿಭಟನೆ ನಡೆದಿದ್ದವು. ಸರ್ಕಾರ ಕೂಡ ಸಾಕಷ್ಟು ಭರವಸೆ ನೀಡಿತ್ತು. ಆದರೆ, ಸರ್ಕಾರದ ಸಚಿವರ ಹೇಳಿಕೆಯೊಂದು ಈಗ ಯುವತಿಯ ಕುಟುಂಬಸ್ಥರ ಆಕ್ರೋಶಕ್ಕೆ ಕಾರಣವಾಗಿದೆ.

ನೇಹಾ ಕೊಲೆ ಕೇಸ್‌ನಲ್ಲಿ ಉಲ್ಟಾ ಹೊಡೆದ ಸರ್ಕಾರ : ನೇಹಾ ಹಿರೇಮಠ್ ಕೊಲೆಯ ನಂತರ ಕೇಂದ್ರ ಗೃಹ ಸಚಿವರಿಂದ ಹಿಡಿದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ. ಪರಮೇಶ್ವರ್ ಅವರು ನೇಹಾ ಕುಟುಂಬಕ್ಕೆ ಸಾಂತ್ವನ ಹೇಳಿದ್ದರು.

ಆದರೆ ಭೇಟಿ ಸಂದರ್ಭದಲ್ಲಿ ಸರ್ಕಾರ ನೇಹಾ ಕೊಲೆಗೆ ತ್ವರಿತ ನ್ಯಾಯ ದೊರಕಿಸಿ ಕೊಡುವ ನಿಟ್ಟಿನಲ್ಲಿ ಪಾಸ್ಟ್‌ಟ್ರ್ಯಾಕ್ ಕೋರ್ಟ್‌ಗೆ ಕೊಡುವುದಾಗಿ ಭರವಸೆ ನೀಡಿದ್ದರು. ಆದರೆ ಈಗ ಸಿದ್ದರಾಮಯ್ಯ ಸರ್ಕಾರ ಕೊಟ್ಟ ಮಾತಿಗೆ ತಪ್ಪಿದೆ ಎಂದು ನೇಹಾ ಹಿರೇಮಠ್ ತಂದೆ ನಿರಂಜನ ಹಿರೇಮಠ್ ಆರೋಪಿಸಿದ್ದಾರೆ.

ಇಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದು, ಪಾಸ್ಟ್‌ಟ್ರ್ಯಾಕ್ ಕೋರ್ಟ್ ಕೊಡುವ ಅವಶ್ಯಕತೆ ಇಲ್ಲ. ಅವಶ್ಯಕತೆ ಬಿದ್ದರೆ ಮಾತ್ರ ಪಾಸ್ಟ್‌ಟ್ರ್ಯಾಕ್ ಕೋರ್ಟ್‌ಗೆ ಕೊಡುತ್ತೇವೆ. ಪಾಸ್ಟ್‌ಟ್ರ್ಯಾಕ್ ಕೋರ್ಟ್‌ಗೆ ಕೊಡುವುದನ್ನ ನಾವು ಡಿಸೈಡ್ ಮಾಡುವುದಿಲ್ಲ. ಪಾಸ್ಟ್‌ಟ್ರ್ಯಾಕ್ ಕೊಡಬೇಕಾ..? ಸ್ಲೋ ಕೋರ್ಟ್‌ಗೆ ಕೊಡಬೇಕಾ ಎಂದು ನಾವು ತೀರ್ಮಾನ ಮಾಡುವುದಿಲ್ಲ. ಪೊಲೀಸ್ ಇಲಾಖೆಯಲ್ಲಿ ಈ ಕೇಸ್ ಹೇಗೆ ಮೂವ್ಮೆಂಟ್ ಆಗಬೇಕೆಂದು ತಿಳಿದುಕೊಂಡು ಮಾಡುತ್ತೇವೆ ಎಂದು ಸಚಿವ ಜಿ. ಪರಮೇಶ್ವರ್ ಹೇಳಿಕೆ ನೀಡಿದ್ದಾರೆ.



ಬಾಗಲಕೋಟ ಮತ್ತು ಚಿತ್ರದುರ್ಗ ಭೋವಿ ಪೀಠದ ಮಹಾಸ್ವಾಮೀಜಿಗಳಾದ ಇಮ್ಮಡಿ ಸಿದ್ದರಾಮೇಶ್ವರ ಅವರ ದೀಕ್ಷಾ ರಜತ ಮಹೋತ್ಸವದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಗೌರವ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗದಗ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರ ಪರಿವಾರ ಇತ್ತೀಚೆಗೆ ಶ್ರೀಗಳನ್ನು ಭೇಟಿ ಮಾಡಿ ಸನ್ಮಾನಿಸಿ, ಆಶೀರ್ವಾದ ಪಡೆದರು.

### ನಿವೃತ್ತ ಡಿಡಿಪಿಐ ಎಮ್.ಎ. ರಡ್ಡೇರ್ ಅವರಿಗೆ ಸನ್ಮಾನ

# ಬದುಕನ್ನು ಸವಿಯಬೇಕೇ ವಿನಃ ಸವೆಸಬಾರದು

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವ ಜನ್ಮ ಅತ್ಯಂತ ಶ್ರೇಷ್ಠವಾದದ್ದು. ಜೀವಿತಾವಧಿಯಲ್ಲಿ ಮನುಷ್ಯನಾದವನು ಸಮಾಜಕ್ಕೆ ಏನನ್ನಾದರೂ ನೀಡಿದರೆ ಮಾತ್ರ ಜೀವನ ಸಾರ್ಥಕ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎಂ.ಎ. ರಡ್ಡೇರ್ ಅಭಿಪ್ರಾಯಪಟ್ಟರು.

ಅವರು ನಿವೃತ್ತಿ ಹೊಂದಿದ ನಿಮಿತ್ತ ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಬದುಕನ್ನು ಸವಿಯಬೇಕೇ ವಿನಃ ಸವೆಸಬಾರದು. ಸಾಧಿಸಬೇಕೇ ಹೊರತು ರೋಧಿಸಬಾರದು. ಸಂತಸ ಪಡಬೇಕೇ ಹೊರತು ಸಂಕಟ ಪಡಬಾರದು ಅಂದಾಗಲೇ ಬದುಕು ಸಂಭ್ರಮ, ಇಲ್ಲವಾದರೆ ಸಂಗ್ರಾಮವೇ ಆಗುತ್ತದೆ. ಸಾಧಿಸುವ ತನಕ ಕಿವುಡನಾಗು, ಸಾಧಿಸಿದ ಬಳಿಕ ಮೂಕನಾಗು ಎಂಬ ಮಾತಿನಂತೆ ಜೀವನ ಸಾಗಿದರೆ ಜನ್ಮ ಸಾರ್ಥಕವಾಗುತ್ತದೆ. ಅಂಥಹ ಸಾರ್ಥಕ ಬದುಕನ್ನು ಕಳೆಯಲು ಗದಗ ಜನತೆ ನನಗೆ ಅವಕಾಶ ನೀಡಿದ್ದಾರೆ. ಹೀಗಾಗಿ ನಾನು, ನನ್ನ



ಕುಟುಂಬ ಸದಾಕಾಲ ಚಿರಋಣಿಯಾಗಿರುತ್ತೇವೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ ಮಾತನಾಡಿ, ಎಂ.ಎ. ರಡ್ಡೇರ್ ಅವರ ಮಾರ್ಗದರ್ಶನದ ಸಹಕಾರದಿಂದ ನಮ್ಮ ಶಾಲೆ ಜಿಲ್ಲೆಯಲ್ಲಿಯೇ ಒಂದು ಮಾದರಿ ಶಾಲೆಯಾಗಿ ಹೊರಹೊಮ್ಮಲು ಸಾಧ್ಯವಾಗಿದೆ. ಅವರ ಸೇವೆ ಮತ್ತು ಮಾರ್ಗದರ್ಶನವನ್ನು ಮುಂದೆಯೂ ನಮ್ಮಶಾಲೆ ಪಡೆಯುತ್ತದೆ. ಅವರನ್ನು ಹಾಗೂ ಅವರ ಧರ್ಮಪತ್ನಿ ಶಾಂತಾ ಅವರನ್ನು ಸನ್ಮಾನಿಸಲು ನಮ್ಮೆಲ್ಲ ಸಿಬ್ಬಂದಿಗೆ ಹೆಮ್ಮೆ ಎನಿಸುತ್ತದೆ ಎಂದರು.

ಎಂ.ಎ. ರಡ್ಡೇರ್ ದಂಪತಿಗಳಿಗೆ ಶಾಲೆಯ ಪರವಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಡೈಯಟ್ ಉಪನ್ಯಾಸಕರಾದ ಎಚ್.ಬಿ. ರಡ್ಡೇರ್, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಮುಖ್ಯೋಪಾಧ್ಯಾಯರಾದ ಎಮ್.ಎಚ್. ಪೂಜಾರ, ಎಸ್.ಜಿ. ಕೋಲ್ಮಿ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಶಶಿಕಲಾ ಬಿ.ಗುಳೇದವರ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು. ಕುಷ್ಟಗಿ, ಗಂಗಾ ಎಂ.ಅಳವಂಡಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಸಂಜೀವಿನಿ ಕೂಲಗುಡಿ ನೆರವೇರಿಸಿದರು. ಶಾರದಾ ಬಾಣದ ವಂದಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಡಾ.ಬಸವರಾಜ ಧಾರವಾಡ ಮಾತನಾಡಿ, ದಣಿವರಿಯದ, ಸದಾಕಾಲ ಶಿಕ್ಷಣದ ಗುಣಮಟ್ಟಕ್ಕಾಗಿ ಚಿಂತನೆಯ ಮೂಲಕ ಗದಗ ಶೈಕ್ಷಣಿಕ ಪರಿಸರದಲ್ಲಿ ತಮ್ಮದೇ ಆದ ಹೆಜ್ಜೆ ಗುರುತುಗಳನ್ನು ಮೂಡಿಸಿದ ಎಂ.ಎ. ರಡ್ಡೇರ್ ಅವರ ಸೇವೆಯನ್ನು ಗದಗ ಶೈಕ್ಷಣಿಕ ಪರಿಸರ ಸದಾಕಾಲ ನೆನಪಿನಲ್ಲಿಟ್ಟುಕೊಳ್ಳುತ್ತದೆ. ಅವರ ಸುದೀರ್ಘ ಶೈಕ್ಷಣಿಕ ಸೇವಾವಧಿಯಲ್ಲಿ ಯಾವುದೇ ಕಳಂಕವನ್ನು ಮೈಗೆ ಅಂಟಿಸಿಕೊಳ್ಳದೇ ಕಳಂಕರಹಿತ ಸಾರ್ಥಕ ಜೀವನ ಕಳೆದಿದ್ದಾರೆ ಎಂದು ಹೇಳಿದರು.

# ಕರವೇ ನೂತನ ಜಿಲ್ಲಾಧ್ಯಕ್ಷರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಆವರಣದಲ್ಲಿ ಕರವೇ ನೂತನ ಜಿಲ್ಲಾಧ್ಯಕ್ಷರಾದ ಹನಮಂತಪ್ಪ ಹೆಚ್.ಅಬ್ಬಿಗೇರಿ ಅವರನ್ನು ಗದಗ ಜಿಲ್ಲಾ ಮಹಿಳಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಜಿಲ್ಲಾಧ್ಯಕ್ಷ ಹನಮಂತಪ್ಪ ಅಬ್ಬಿಗೇರಿ, ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರು ನನ್ನ ಮೇಲೆ ನಂಬಿಕೆ-ವಿಶ್ವಾಸವಿಟ್ಟು ಮತ್ತೊಮ್ಮೆ ಗದಗ ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಗದಗ ಜಿಲ್ಲೆಯಲ್ಲಿ ಸಂಘಟನೆಯನ್ನು ಬಲಿಷ್ಠಗೊಳಿಸಲು, ನಾಡು-ನುಡಿ, ನೆಲ-ಜಲಕ್ಕಾಗಿ, ಕನ್ನಡದ ಉಳಿವಿಗಾಗಿ ಶ್ರಮಿಸುತ್ತೇನೆ ಎಂದರು.

ಮಹಿಳಾ ಘಟಕದ ಆಶಾ ಜೂಲಗುಡ್ಡ, ರೇಷ್ಮಾ ಅಬ್ಬಿಗೇರಿ, ಲಕ್ಷ್ಮೀ ಹಿತ್ತಲಮನಿ, ರತ್ನಮ್ಮ ಯಲಬುರ್ಗಾ, ಶೋಭಾ ಕಲಾಲ್, ಸಾವಿತ್ರಿ ಅತ್ತಿಗೇರೆ, ಮಾಲಾ ಪಾಟೀಲ್, ರೇಷ್ಮಾ, ಸುಮಾ, ಕವಿತಾ, ಪಾರ್ವತಿ, ಶಿವಪುತ್ರಮ್ಮ, ಮುತ್ತಣ್ಣ ಚೌಡಣ್ಣನವರ್, ವಿನಾಯಕ ಬದಿ, ಶರಣಪ್ಪ ಕರಮುಡಿ, ಕುಮಾರ ರೇವಣ್ಣವರ್, ಶಿವು ಮಠದ, ದಾವಲಸಾಬ ತಹಸೀಲ್ದಾರ್, ತೌಶಿಫ್ ಡಾಲಾಯತ್, ಸಲಿಂ ಶಿರವರ್, ಸುಲೇಮಾನ್ ಮಂಜಳಾಪುರ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸೇವಾ ಸಂಘದ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮಕಾನಗಲ್ಲಿಯ ಗನಸಯ್ಯೆದ ಬಾದಶಾ, ಅಮಿತ್ ಭಾಷಾ, ಜಹಾಂಗೀರ ಭಾಷಾಲಾಲ ಶಾವಲಿ ಟಕ್ಕೇದ ದೇವರ ಸೇವಾ ಸಂಘದ ಅಧ್ಯಕ್ಷರಾಗಿ ಶಿವಪ್ಪ ತಿಪ್ಪಣ್ಣ ಬಳ್ಳಾರಿ, ಗೌರವ ಅಧ್ಯಕ್ಷರಾಗಿ ರಾಜೇಸಾಬ ದಾ.ರೋಣದ, ಶಂಕರಪ್ಪ ನಿಂ.ಯರಗುಡಿ ಅವರನ್ನು ಆಯ್ಕೆ ಮಾಡಲಾಗಿದೆ.

ಟಕ್ಕೇದ ದೇವರ ಸಂಘದ ಅಧ್ಯಕ್ಷರಾಗಿ ಶಿವಪ್ಪ ತಿ.ಬಳ್ಳಾರಿ, ಉಪಾಧ್ಯಕ್ಷರಾಗಿ ರಂಗಪ್ಪ ಹ.ಯರಗುಡಿ, ವಿಜಯ ರಾ.ಕೌಜಗೇರಿ, ಕಾರ್ಯದರ್ಶಿ ದಾದಾಪೀರ ಮ.ಮುಂಡರಗಿ, ಸಹ-ಕಾರ್ಯದರ್ಶಿ ರಜಾಕ ಯಲಿಗಾರ, ಖಜಾಂಚಿಯಾಗಿ ನಾಗರಾಜ ಎ.ಕುರಗೋಡ, ಸದಸ್ಯರಾಗಿ ಶ್ರೀಕಾಂತ ಅರಕೇರಿ, ಶಿವಕುಮಾರ ಯರಗುಡಿ, ಅಶೋಕ ಅರಕೇರಿ, ಗಜಬೀರ ತಹಸೀಲ್ದಾರ, ಮುತ್ತಣ್ಣ ಮಡಿವಾಳರ, ಮಹಮ್ಮದಅಲಿ ಟಫಲವಾಲೆ, ರಫೀಕ ಮುಲ್ಲಾ, ಈರಣ್ಣ ಕೌಜಗೇರಿ, ಮಂಜುನಾಥ ಡವಳೇಶ್ವರಿ, ರಫೀಕ ಢಾಲಾಯತ, ಸುಲೇಮಾನ ಬನ್ನೂರ, ದಾದಾಪೀರ ಸವಣೂರ, ಸುನೀಲ ಪೂಜಾರ, ಕುಮಾರ ತಾಳೂರು, ಮಂಜುನಾಥ ಕೌಜಗೇರಿ, ಬಾಬುಲಾಲ ಸವಣೂರ ಇವರುಗಳನ್ನು ಆಯ್ಕೆ ಮಾಡಲಾಯಿತು.

# ಡಾ. ಜಗಜೀವನರಾಮ್ ನಾಮಫಲಕ ಅಳವಡಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಟಾಂಗಾ ಕೂಟ ಹತ್ತಿರದ ಕ್ಲಾಥ್ ಮಾರ್ಕೆಟ್‌ನಲ್ಲಿ ಡಾ. ಬಾಬು ಜಗಜೀವನರಾಮ್ ನಾಮಫಲಕ ಮತ್ತು ಗೇಟ್ ಅಳವಡಿಸಲು ಕ್ರಮ ಕೈಗೊಳ್ಳಬೇಕೆಂದು ಸಚಿವ ಹೆಚ್. ಕೆ. ಪಾಟೀಲರಿಗೆ ಸಮತಾ ಸೇನಾ ಸಂಘಟನೆಯ ಗದಗ ಜಿಲ್ಲಾಧ್ಯಕ್ಷ ಕಿರಣ ಗಾಮನಗಟ್ಟಿ ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕಿರಣ ಗಾಮನಗಟ್ಟಿ ಮಾತನಾಡಿ, ಈ ನಾಮಫಲಕದಲ್ಲಿ ಡಾ. ಬಿ.ಆರ್. ಅಂಬೇಡ್ಕರ, ಡಾ. ಬಾಬು ಜಗಜೀವನರಾಮ, ಶಿವಶರಣ ಸಮಗಾರ ಹರಳಯ್ಯನವರ ಭಾವಚಿತ್ರಗಳನ್ನು ಅಳವಡಿಸಬೇಕು. ಈ ಬಗ್ಗೆ ಗದಗ-ಬೆಟಗೇರಿ ನಗರಸಭೆ ಠರಾವು ಮಾಡಿಸಲು ನಿರ್ದೇಶನ ನೀಡಬೇಕೆಂದು ಸಚಿವರಲ್ಲಿ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಹಿರಿಯರಾದ ವೀರೇಶ ಮುದೇನಗುಡಿ, ಶ್ರೀಧರ ಅಗಸಿಮನಿ, ಮಂಜುನಾಥ ಕೊರವರ, ರಫೀಕ ದಾರವಾಡ, ವಿನಾಯಕ ಅಗಸಿಮನಿ ಮುಂತಾದವರು ಉಪಸ್ಥಿತರಿದ್ದರು.

# ಮುಂಬರುವ ಚುನಾವಣೆಗಳಲ್ಲಿ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ



ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷ ಎಸ್.ಎಸ್. ರಡ್ಡೇರ ಸಮ್ಮುಖದಲ್ಲಿ ಹಾವೇರಿ ಜಿಲ್ಲಾ ಅಧ್ಯಕ್ಷರಾಗಿ ಮಕ್ತುಮ್‌ಸಾಬ ಮುಲ್ಲಾ ಇವರನ್ನು ಆಯ್ಕೆ ಮಾಡಿ ನೇಮಕಾತಿ ಪತ್ರವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಎಸ್. ಎಸ್. ರಡ್ಡೇರ ಮಾತನಾಡಿ, ರಾಜ್ಯದಲ್ಲಿ ಹಿಂದಿನ ಬಿಜೆಪಿ ಸರ್ಕಾರದ ಭ್ರಷ್ಟಾಚಾರಕ್ಕೆ ಬೇಸತ್ತು ಜನತೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ಆದರೆ ರಾಜ್ಯ ಸರ್ಕಾರ ಕಳೆದ ಒಂದು ವರ್ಷದಿಂದ ಯಾವುದೇ ಅಭಿವೃದ್ಧಿ ಕೆಲಸ ಮಾಡದೇ ಹಗರಣಗಳಲ್ಲಿ ನಿರತವಾಗಿದೆ. ಪರ್ಯಾಯವಾಗಿ ನಮ್ಮ ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ ಪಕ್ಷವು ರಾಜ್ಯಾದ್ಯಂತ ಪಕ್ಷದ ಸಂಘಟನೆಯಲ್ಲಿ ತೊಡಗಿದ್ದು, ಮುಂಬರುವ ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ಶಿಗ್ಗಾಂವ ಕ್ಷೇತ್ರದ ಉಪಚುನಾವಣೆಯಲ್ಲಿ ಸ್ಪರ್ಧಿಸುತ್ತೇವೆ ಎಂದು ಹೇಳಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ರಾಮನಕೊಪ್ಪ ಮಾತನಾಡಿ, ರಾಜ್ಯದಲ್ಲಿ ನಡೆದ ಹಲವಾರು ಅಹಿತಕರ ಘಟನೆಗಳಿಂದ ರಾಜ್ಯದಲ್ಲಿ ಕಾನೂನು ವ್ಯವಸ್ಥೆಯ ಹದಗೆಟ್ಟಿದೆ ಮತ್ತು ರಾಜ್ಯದ ಜನತಗೆ ಸುರಕ್ಷತೆಯ ಭೀತಿ ಕಾಡುತ್ತಿದೆ ಎಂದು ಹೇಳಿದರು.

ರಾಜ್ಯ ಉಪಾಧ್ಯಕ್ಷ ಶಿವಾನಂದಯ್ಯ ಹಿರೇಮಠ ಮಾತನಾಡಿದರು. ಪಕ್ಷದ ಗದಗ ತಾಲೂಕಾ ಅಧ್ಯಕ್ಷರಾಗಿ ಆಯ್ಕೆಯಾದ ಗಣೇಶ ಚಲವಾದಿ ಅವರಿಗೆ ಆದೇಶ ಪತ್ರ ನೀಡಲಾಯಿತು.

ರಾಜ್ಯ ಉಪಾಧ್ಯಕ್ಷ ಶಿವಾನಂದಯ್ಯ ಹಿರೇಮಠ, ರಾಜ್ಯ ಕಾರ್ಯದರ್ಶಿ ಯು. ಆರ್. ಭೂಸನೂರಮಠ, ಗದಗ ಜಿಲ್ಲಾ ಮಹಿಳಾ ಅಧ್ಯಕ್ಷೆ ರತ್ನಾ ಪೂಜಾರ್, ಗದಗ ಜಿಲ್ಲಾಧ್ಯಕ್ಷ ಸಚಿನ್ ಮಲ್ಲಾಡದ, ಪ್ರಭಾಕರ ಹೆಬಸೂರ, ಸಣ್ಣಪ್ಪ ರಾಠೂಡ, ಮಹಾದೇವಯ್ಯ ಹಿರೇಮಠ, ಉಮೇಶ್ ಕೋನರೆಡ್ಡಿ ಸೇರಿದಂತೆ ಪಕ್ಷದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನಂದಿ ಮೂರ್ತಿ ಪ್ರತಿಷ್ಠಾಪನೆ, ಕಳಸ ಮೆರವಣಿಗೆ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದಲ್ಲಿ ನೂತನವಾಗಿ ನವೀಕರಣಗೊಳಿಸಿರುವ ಚಂದ್ರಮೌಳೇಶ್ವರ ಮಂದಿರದ ನಂದಿ ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣದ ಅಂಗವಾಗಿ ಬುಧವಾರ ಮೂರ್ತಿ ಹಾಗೂ ಕಳಸದ ಮೆರವಣಿಗೆ ಸಂಭ್ರಮದಿಂದ ನಡೆಯಿತು.

ಸ್ಥಳೀಯ ಗ್ರಾಮ ದೇವತೆ ಹಿರೇದುರ್ಗಾದೇವಿ ದೇಗುಲದಿಂದ ಆರಂಭವಾದ ಮೆರವಣಿಗೆಯಲ್ಲಿ ಸುಮಂಗಲೆಯರು ಕುಂಭಮೇಳ ಹೊತ್ತು ಸಂಚರಿಸಿ ನಂದಿ ದೇವರ ಮೂರ್ತಿ ಹಾಗೂ ಕಳಸವನ್ನು ವಿಜೃಂಭಣೆಯಾಗಿ ಬರಮಾಡಿಕೊಂಡರು.

ಈ ವೇಳೆ ಮಾಜಿ ಸಚಿವ ಕಳಕಪ್ಪ ಬಂಡಿ ಮಾತನಾಡಿ, ಸಂಸ್ಕೃತಿ ಹಾಗೂ ಧಾರ್ಮಿಕ ಆಚರಣೆಗಳಲ್ಲಿ ತೊಡಗಿದಾಗ ಮನುಷ್ಯನ ಬದುಕು ಸುಂದರ ಹಾಗೂ ಅರ್ಥಪೂರ್ಣವಾಗುತ್ತದೆ. ಪುರಾತನ ಚಂದ್ರಮೌಳೇಶ್ವರ ಮಂದಿರ ಇರುವ ಸ್ಥಳದಲ್ಲಿಯೇ ದೇಗುಲವನ್ನು ಸುಂದರವಾಗಿ ನವೀಕರಿಸಲಾಗಿದೆ. ಈ ಕಾರ್ಯಕ್ಕೆ ಭಕ್ತಾಧಿಗಳು ನೀಡಿದ ಸಹಕಾರ ಸ್ಮರಣೀಯ. ಇಂತಹ ಮಹತ್ವದ ಹಾಗೂ ಅರ್ಥಪೂರ್ಣ ಕೈಂಕರ್ಯದಲ್ಲಿ ಭಾಗಿಯಾದ ತೃಪಿಯಿದೆ ಎಂದರು.

ಗುರುವಾರ ನೂತನ ಗೋಪುರ ಹಾಗೂ ನಂದಿ ವಿಗ್ರಹ ಪ್ರತಿಷ್ಠಾಪನೆ ಪ್ರಯುಕ್ತ ಮಹಾಮೃತ್ಯುಂಜಯ ಹೋಮ, ಮಹಾಗಣಪತಿ ಹವನ, ಸುದರ್ಶನ ಹೋಮ ಸೇರಿದಂತೆ ಚಂದ್ರಮೌಳೇಶ್ವರ ಸ್ವಾಮಿಗೆ ವಿಶೇಷ ಮಹಾರುದ್ರಾಭಿಷೇಕ ನಡೆಯಲಿದೆ ಎಂದು ತಿಳಿಸಿದರು.

ಈ ವೇಳೆ ಭದರೀನಾಥ ಜೋಶಿ, ಸಿದ್ದಣ್ಣ ಬಳಿಗೇರ, ಅಶೋಕ ವನ್ನಾಲ, ಬಸವರಾಜ ಬಂಕದ, ಭಾಸ್ಕರ ರಾಯಬಾಗಿ, ಷಣ್ಮುಖಪ್ಪ ಚಿಲಝರಿ, ಪ್ರಕಾಶ ಕಾರಡಗಿ, ಮುದಿಯಪ್ಪ ಮುಧೋಳ, ಸುಭಾಸ ಮ್ಯಾಗೇರಿ, ಮೂಕಪ್ಪ ನಿಡಗುಂದಿ, ಬಸವರಾಜ ಹೂಗಾರ, ಮುತ್ತಣ್ಣ ಚಟ್ಟೇರ, ಸುಲೇಮಾನ ಮೋಮಿನ, ಪರಸಪ್ಪ ಬಂಡಿ, ವಿಜಯ ಬೂದಿಹಾಳ, ಶಿವಣ್ಣ ಸಂಗನಾಳ, ಸಂಗಪ್ಪ ಕುಂಬಾರ, ಬಸವರಾಜ ಕುಷ್ಟಗಿ, ಶೇಖಪ್ಪ ಚಳಗೇರಿ, ನಿಂಗಪ್ಪ ತೊಂಡಿಹಾಳ ಮುಂತಾದವರಿದ್ದರು.

# ಸಂಸತ್ ಬಜೆಟ್ ಅಧಿವೇಶನ: ಸದನದಲ್ಲಿ ಪ್ರತಿಧ್ವನಿಸಿದ ಜಾತಿ ಗಣತಿ, ವೈಯಕ್ತಿಕ ಟೀಕೆಗಿಳಿದ ಬಿಜೆಪಿ ಸಂಸದ ಠಾಕೂರ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿ ಸಂಸದ ಅನುರಾಗ್ ಠಾಕೂರ್ ಅವರು ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರ ಜಾತಿಯ ಕುರಿತು ಹೇಳಿಕೆ ನೀಡಿದ್ದು, ಕಾಂಗ್ರೆಸ್ ನಾಯಕ ಅವರ ಹೇಳಿಕೆಯನ್ನು ನಿರಾಕರಿಸಿದ್ದಾರೆ. ವಾಗ್ವಾದದ ನಂತರ, ಲೋಕಸಭೆಯು ಮಂಗಳವಾರ ಪ್ರತಿಪಕ್ಷಗಳು ಮತ್ತು ಆಡಳಿತ ಪಕ್ಷದ ನಾಯಕರ ನಡುವೆ ಮಾತಿನ ಚಕಮಕಿಗೆ ಸಾಕ್ಷಿಯಾಯಿತು.

ಜಾತಿ ಗಣತಿ ಕುರಿತ ಕಾಂಗ್ರೆಸ್ ನಿಲುವನ್ನು ಪ್ರಶ್ನಿಸುವ ಸಂದರ್ಭದಲ್ಲಿ ಹಿಮಾಚಲ ಪ್ರದೇಶದ ಹಮೀರ್‌ಪುರದ ಬಿಜೆಪಿ ಸಂಸದರು 'ಜಾತಿ ಗೊತ್ತಿರುವವರು ಜನಗಣತಿಗಾಗಿ ವಕಾಲತ್ತು ವಹಿಸುತ್ತಿದ್ದಾರೆ' ಎಂದು ಹೇಳಿಕೆ ನೀಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ರಾಹುಲ್ ಗಾಂಧಿ ಠಾಕೂರ್‌ಗೆ ಪ್ರತ್ಯುತ್ತರ ನೀಡಿದ್ದು, ತಮ್ಮನ್ನು ಅವಮಾನಿಸಲಾಗಿದೆ ಎಂದು ಪ್ರತಿಪಾದಿಸಿದರು. ನಿಮ್ಮ ದಾಳಿಗಳ ಹೊರತಾಗಿಯೂ, ಇಂಡಿಯಾ ಬ್ಲಾಕ್ ಜಾತಿ ಗಣತಿಯನ್ನು ನಡೆಸುವುದನ್ನು ಖಚಿತಪಡಿಸುತ್ತದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka